# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1359

ಸದಸ್ಯರು ಹೆಸರು : ಶ್ರೀ ಸಿ.ಟಿ. ರವಿ
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 18.12.2025

ಉತ್ತರಿಸುವ ಸಚಿವರು : ಗೃಹ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 2.5 ವರ್ಷದಿಂದ ಸರ್ಕಾರ ಎಷ್ಟು ಮತ್ತು ಯಾವ ಯಾವ ವಿಚಾರಕ್ಕೆ ಸಂಬಂಧಪಟ್ಟಂತೆ ವಿಚಾರಣಾ ಆಯೋಗ ಮತ್ತು ವಿಶೇಷ ತನಿಖಾ ತಂಡಗಳನ್ನು ರಚಿಸಿದೆ; ಈ ವಿಚಾರಣಾ ಆಯೋಗ/ವಿಶೇಷ ತನಿಖಾ ತಂಡದ ನೇತೃತ್ವ ವಹಿಸಿರುವವರು ಯಾರು; ಇವರಿಗೆ ವಹಿಸಿರುವ ಜವಾಬ್ದಾರಿಗಳೇನು; (ಸಮಗ್ರ ವಿವರ ನೀಡುವುದು) | **1.** ಕರ್ನಾಟಕ ಸ್ಟೇಟ್ ಕಂಟ್ರ್ಯಾಕ್ಟರ್ ಅಸೋಸಿಯೇಷನ್ ಅಧ್ಯಕ್ಷರಾದ ಶ್ರೀ ಡಿ.ಕೆಂಪಣ್ಣ ಇವರು ಹೆಚ್ಚಿನ ಪ್ರಮಾಣದಲ್ಲಿ ಕಾಮಗಾರಿ ನಡೆಸುವ ಇಲಾಖೆಗಳಾದ ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಸಣ್ಣ ನೀರಾವರಿ ಇಲಾಖೆಗಳಲ್ಲಿ ನಡೆಸುವ ಟೆಂಡರ್ ಪ್ರಕ್ರಿಯೆ, ಪ್ಯಾಕೇಜ್ ಪದ್ಧತಿ, ಪುನರ್ ಅಂದಾಜು (Revised Estimate), ಬಾಕಿ ಮೊತ್ತ ಬಿಡುಗಡೆ ಇತ್ಯಾದಿ ವಿಷಯಗಳಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದ ಕುರಿತು - ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಹೆಚ್.ಎನ್. ನಾಗಮೋಹನದಾಸ್ ರವರ ನೇತೃತ್ವದಲ್ಲಿ ವಿಚಾರಣಾ ಆಯೋಗವನ್ನು ರಚಿಸಿದೆ **(ಅನುಬಂಧ-1)**<br><br>**2.** ನಗರಾಭಿವೃದ್ಧಿ ಇಲಾಖೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಕಾಮಗಾರಿಗಳ ಲಂಚಗುಳಿತನ / ಭ್ರಷ್ಟಾಚಾರದ ಬಗ್ಗೆ ತನಿಖೆಗೆ ಎಸ್.ಐ.ಟಿ. ರಚಿಸಿದ್ದು, ನಗರಾಭಿವೃದ್ಧಿ ಇಲಾಖೆಯ ಯಾವ ಯಾವ ಸಂಸ್ಥೆಗಳ ಅವ್ಯವಹಾರವನ್ನು ತನಿಖೆಗೆ ಒಳಪಡಿಸಬೇಕು ಎಂಬ ಪ್ರಶ್ನೆಗೆ ಕಾಮಗಾರಿಗಳ ಬಿಲ್ ಮಂಜೂರು ಮಾಡಲು ಕಮಿಷನ್ ನೀಡುವ ಆರೋಪಕ್ಕೆ ಸಂಬಂಧಿಸಿದಂತೆ ವಿಚಾರಣಾ ಆಯೋಗಕ್ಕೆ ವಹಿಸಲಾಗಿರುವ ಭ್ರಷ್ಟಚಾರದ ಆರೋಪಗಳ ಬಗ್ಗೆ ಸಮಗ್ರ ವಿಚಾರಣೆ ನಡೆಸಿ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಹೆಚ್.ಎನ್. ನಾಗಮೋಹನದಾಸ್ ರವರ ವಿಚಾರಣಾ ಆಯೋಗಕ್ಕೆ ಶಿಫಾರಸ್ಸು ಮಾಡಲು ವಹಿಸಿದೆ **(ಅನುಬಂಧ-2)**.<br><br>**3.** ಕೋವಿಡ್-19 ಸಾಂಕ್ರಾಮಿಕ ರೋಗದ ನಿವಾರಣೆ ಹಾಗೂ ತಡೆಗಟ್ಟುವಿಕೆ ಸಂಬಂಧವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ಇತರೆ ಇಲಾಖೆಗಳು ಹಾಗೂ ಈ ಇಲಾಖೆಗಳ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಂಸ್ಥೆಗಳಲ್ಲಿ ಔಷಧಿ, ಉಪಕರಣಗಳು ಹಾಗೂ ಸಾಮಗ್ರಿಗಳ ಖರೀದಿ, ಆಮ್ಲಜನಕ ನಿರ್ವಹಣೆ, ಆಮ್ಲಜನಕ ಕೊರತೆಯಿಂದ ಉಂಟಾದ ಸಾವುಗಳು ಹಾಗೂ ಇತ್ಯಾದಿ ವಿಷಯಗಳ ಕುರಿತು 2021ರ ಜುಲೈ- ಆಗಸ್ಟ್ ನಲ್ಲಿ ನಡೆದ ಸಾರ್ವಜನಿಕ ಲೆಕ್ಕಪತ್ರ ಸಮಿತಿಯು ನೀಡಿರುವ ವರದಿಯಲ್ಲಿನ ಗಂಭೀರವಾದ |

| | | |
|---|---|---|
| | | ಆರೋಪಗಳ ಬಗ್ಗೆ - ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ಇವರ ನೇತೃತ್ವದಲ್ಲಿ ವಿಚಾರಣಾ ಆಯೋಗವನ್ನು ರಚಿಸಿದೆ **(ಅನುಬಂಧ-3)**.<br><br>**4.** ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಆಮ್ಲಜನಕ ಕೊರತೆಯಿಂದಾಗಿ ಮರಣ ಹೊಂದಿರುವ ಘಟನೆಗೆ ಸಂಬಂಧಿಸಿದಂತೆ ವಿಚಾರಣೆ ನಡೆಸಲು ನೇಮಿಸಲಾಗಿದ್ದ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಬಿ.ಎ.ಪಾಟೀಲ್ ಇವರ ತನಿಖಾ ವರದಿಯನ್ನು ಒಪ್ಪದೇ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ಇವರ ವಿಚಾರಣಾ ಆಯೋಗಕ್ಕೆ ವಹಿಸುವಂತೆ ಕೋರಿರುತ್ತದೆ. ಅದರಂತೆ ಪರಿಶೀಲಿಸಿ, ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಆಮ್ಲಜನಕ ಕೊರತೆಯಿಂದಾಗಿ ಮರಣ ಹೊಂದಿರುವ ಪ್ರಕರಣದ ಕುರಿತು ವಿಚಾರಣೆ ನಡೆಸಲು ಹಾಲಿ ಅಸ್ತಿತ್ವದಲ್ಲಿರುವ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ವಿಚಾರಣಾ ಆಯೋಗಕ್ಕೆ ಹೆಚ್ಚುವರಿಯಾಗಿ ವಹಿಸಿದೆ **(ಅನುಬಂಧ-4)**.<br><br>**5.** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿನ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಪ್ರಕರಣವು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಹೆಚ್‌ಡಿ 87 ಪಿಸಿಇ 2024, ದಿನಾಂಕ: 14.07.2024 ರನ್ವಯ ಸದರಿ ಅಕ್ರಮದ ಬಗ್ಗೆ ವಿಚಾರಣೆ ನಡೆಸಲು ಗೌರವಾನ್ವಿತ ಮಾನ್ಯ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಪಿ.ಎನ್.ದೇಸಾಯಿ, ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ವಿಚಾರಣಾ ಆಯೋಗವನ್ನು ರಚಿಸಲಾಗಿತ್ತು **(ಅನುಬಂಧ-5)**.<br><br>**6.** ದಿನಾಂಕ: 04.06.2025ರಲ್ಲಿ, ಆರ್.ಸಿ.ಬಿ. ತಂಡದ ವಿಜಯೋತ್ಸವ ಅಭಿನಂದನಾ ಸಮಾರಂಭ ನಡೆಯುವ ಸಂದರ್ಭದಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಉಂಟಾದ ಕಾಲ್ತುಳಿತ ಹಾಗೂ ಮೃತಪಟ್ಟವರ ಸಾವಿಗೆ ಕಾರಣಗಳು, ಘಟನಾವಳಿಗಳ ಸರಣಿ ಹಾಗೂ ಸನ್ನಿವೇಶಗಳ ಬಗ್ಗೆ ಮತ್ತು ಈ ಪ್ರಕರಣದಲ್ಲಿ ಉಂಟಾಗಿರಬಹುದಾದ ಲೋಪಗಳ ಕುರಿತು; ಈ ಲೋಪಕ್ಕೆ ಕಾರಣರಾದವರ ಬಗ್ಗೆ ಹಾಗೂ ನಿರ್ಲಕ್ಷತೆಯಿಂದ ಉಂಟಾಗಿದೆಯೇ ಎಂಬ ಬಗ್ಗೆ- ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಜಾನ್ ಮೈಕಲ್ ಕುನ್ಹಾ ರವರ ನೇತೃತ್ವದಲ್ಲಿ ಏಕಸದಸ್ಯ ವಿಚಾರಣಾ ಆಯೋಗವನ್ನು ರಚಿಸಿದೆ **(ಅನುಬಂಧ-6)**.<br><br>**7.** ವಿಶೇಷ ತನಿಖಾ ತಂಡವನ್ನು ರಚಿಸಿದ ವಿವರಗಳನ್ನು **ಅನುಬಂಧ- 7 ರಲ್ಲಿ** ಒದಗಿಸಲಾಗಿದೆ. |
| ಆ) | ಎಷ್ಟು ತನಿಖಾ ತಂಡ/ ವಿಚಾರಣಾ | ವಿಚಾರಣಾ ಆಯೋಗಗಳಿಂದ ಸಲ್ಲಿಕೆಯಾದ ವರದಿಗಳು, |

| | | |
|---|---|---|
| | | ಹಾಗೂ ತಡೆಗಟ್ಟುವಿಕೆ ಸಂಬಂಧವಾಗಿರಚಿಸಲಾದ ಗೌರವಾನ್ವಿತ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ಇವರ ನೇತೃತ್ವದಲ್ಲಿನ ವಿಚಾರಣಾ ಆಯೋಗದ ವರದಿ ಸ್ವೀಕೃತವಾಗಿರುವುದಿಲ್ಲ.<br><br>**4.** ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಆಮ್ಲಜನಕ ಕೊರತೆಯಿಂದಾಗಿ ಮರಣ ಹೊಂದಿರುವ ಘಟನೆಗೆ ಸಂಬಂಧಿಸಿದಂತೆ, ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ವಿಚಾರಣಾ ಆಯೋಗದ ವರದಿ ಸ್ವೀಕೃತವಾಗಿರುವುದಿಲ್ಲ.<br><br>**5.** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿನ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಪ್ರಕರಣದ ಕುರಿತು, ಗೌರವಾನ್ವಿತ ಮಾನ್ಯ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಪಿ.ಎನ್.ದೇಸಾಯಿ, ಇವರ ಅಧ್ಯಕ್ಷತೆಯ ಏಕಸದಸ್ಯ ವಿಚಾರಣಾ ಆಯೋಗವು ದಿನಾಂಕ: 30.07.2025 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ. ಸದರಿ ವರದಿಯನ್ನು ಸರ್ಕಾರವು ಅಂಗೀಕರಿಸಿದ್ದು, ವರದಿಯು ಸರ್ಕಾರದ ಪರಿಶೀಲನೆಯಲ್ಲಿದೆ.<br><br>**6.** ಆರ್.ಸಿ.ಬಿ. ತಂಡದ ವಿಜಯೋತ್ಸವ ಅಭಿನಂದನಾ ಸಮಾರಂಭ ನಡೆಯುವ ಸಂದರ್ಭದಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಉಂಟಾದ ಕಾಲ್ತುಳಿತ ಹಾಗೂ ಮೃತಪಟ್ಟವರ ಸಾವಿಗೆ ಕಾರಣಗಳು, ಘಟನಾವಳಿಗಳ ಸರಣಿ ಹಾಗೂ ಸನ್ನಿವೇಶಗಳ ಬಗ್ಗೆ ಮತ್ತು ಈ ಪ್ರಕರಣದಲ್ಲಿ ಉಂಟಾಗಿರಬಹುದಾದ ಲೋಪಗಳ ಕುರಿತು; ಈ ಲೋಪಕ್ಕೆ ಕಾರಣರಾದವರ ಬಗ್ಗೆ ಹಾಗೂ ನಿರ್ಲಕ್ಷತೆಯಿಂದ ಉಂಟಾಗಿದೆಯೇ ಎಂಬ ಬಗ್ಗೆ-ಶ್ರೀ ಜಾನ್ ಮೈಕಲ್ ಕುನ್ಹಾ ರವರ ನೇತೃತ್ವದಲ್ಲಿ ವಿಚಾರಣಾ ಆಯೋಗವು ದಿನಾಂಕ:10.07.2025 ವರದಿಯನ್ನು ಸಲ್ಲಿಸಿದೆ. ಸರ್ಕಾರವು ವರದಿಯನ್ನು ಅಂಗೀಕರಿಸಿದೆ ಹಾಗೂ ವರದಿಯಲ್ಲಿ ಉಲ್ಲೇಖಿಸಿರುವ ಖಾಸಗಿ ಸಂಸ್ಥೆಗಳ ವಿರುದ್ಧ ಕಾನೂನು ರೀತ್ಯಾ ಕ್ರಮಕೈಗೊಳ್ಳಲು ಮತ್ತು ಸರ್ಕಾರದ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಪ್ರಾರಂಭಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಅದರಂತೆ ಅನುಕ್ರಮವಾಗಿ ಸಿ.ಐ.ಡಿ. ಗೆ ಮತ್ತು ಸಿ.ಆ.ಸು.ಇಲಾಖೆಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿದೆ.<br><br>**7.** ವಿಶೇಷ ತನಿಖಾ ತಂಡಗಳು ತನಿಖೆಯ ನಂತರ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸುತ್ತವೆ. ಸಕ್ಷಮ ನ್ಯಾಯಾಲಯವು ವಿಶೇಷ ತನಿಖಾ ತಂಡದ ಅಂತಿಮ ವರದಿಯ ಆಧಾರದ ಮೇಲೆ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿ ಆದೇಶ ಹೊರಡಿಸುವುದರಿಂದ, ಸದರಿ ವಿಶೇಷ ತನಿಖಾ ವರದಿಗಳ ಮೇಲೆ ಸರ್ಕಾರದ ಹಂತದಲ್ಲಿ ಯಾವುದೇ ಕ್ರಮ ಇರುವುದಿಲ್ಲ. |

ಹೆಚ್‌ಡಿ 490 ಪಿಸಿಇ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು.

| | | |
|---|---|---|
| | ಆಯೋಗಗಳು ತಮ್ಮ ವರದಿಯನ್ನು ಸರ್ಕಾರಕ್ಕೆ ಯಾವಾಗ ಸಲ್ಲಿಸಿವೆ; (ವರದಿಯ ಪ್ರತಿಯನ್ನು ನೀಡುವುದು) | ಅಂಗೀಕಾರ ಇತ್ಯಾದಿ ವಿವರಗಳು ಈ ಕೆಳಗಿನಂತಿವೆ :- <br> **1.** ಶ್ರೀ ಹೆಚ್.ಎನ್.ನಾಗಮೋಹನದಾಸ್ ರವರ ನೇತೃತ್ವದಲ್ಲಿ ವಿಚಾರಣಾ ಆಯೋಗವು ದಿನಾಂಕ:12.03.2025ರಂದು ವರದಿಯನ್ನು ಸಲ್ಲಿಸಿದೆ. ಸಚಿವ ಸಂಪುಟದ ನಿರ್ಣಯದಲ್ಲಿ, ವಿಚಾರಣಾ ವರದಿಯ ಎಲ್ಲಾ ಸಲಹೆ ಹಾಗೂ ಶಿಫಾರಸ್ಸುಗಳ ಕುರಿತು ಪರಿಶೀಲಿಸಿ, ಸರ್ಕಾರದ ಬೊಕ್ಕಸಕ್ಕೆ ಉಂಟಾಗಿರುವ ನಷ್ಟದ ಬಗ್ಗೆ ಹಾಗೂ ಮುಂದಿನ ದಿನಗಳಲ್ಲಿ ಇಂತಹ ಅವ್ಯವಹಾರಗಳು ಆಗದಿರುವಂತೆ ತಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕಕ್ಕೆ ಅಧಿನಿಯಮಕ್ಕೆ ಸೂಕ್ತ ತಿದ್ದುಪಡಿ ತರುವ ಬಗ್ಗೆ ಹಾಗೂ ಇತರೆ ಆರ್ಥಿಕ ಸುಧಾರಣೆಗಳನ್ನು ತರುವ ಬಗ್ಗೆ ಪರಿಶೀಲಿಸಿ, ಕ್ರೂಢೀಕೃತ ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮಂಡಿಸಲು ಆರ್ಥಿಕ ಇಲಾಖೆಗೆ ಸೂಚಿಸಿರುತ್ತದೆ. ಮುಂದುವರೆದು, ಮಾನ್ಯ ಮುಖ್ಯಮಂತ್ರಿಯವರು ಆಯಾ ಇಲಾಖೆಗಳು ಹಿರಿಯ ಐ.ಎ.ಎಸ್. ಅಧಿಕಾರಿ ಅಥವಾ ನಿವೃತ್ತ ಉನ್ನತ ಐ.ಎ.ಎಸ್. ಅಧಿಕಾರಿಯ ನೇತೃತ್ವದಲ್ಲಿ ಪ್ರತ್ಯೇಕವಾಗಿ ಸಮಿತಿ ರಚನೆ ಮಾಡಿ ಅದರಲ್ಲಿ ಹಣಕಾಸಿಗೆ ಸಂಬಂಧಿಸಿದಂತೆ, ಆರ್ಥಿಕ ಇಲಾಖೆಯ ಜಂಟಿ ಕಾರ್ಯದರ್ಶಿ/ ಮೇಲ್ಪಟ್ಟ ಅಧಿಕಾರಿ ಹಾಗೂ ತಾಂತ್ರಿಕ ಪರಿಣಿತಿ ಹೊಂದಿರುವ ದಿನಾಂಕ:31.12.2018 ರೊಳಗೆ ವಯೋನಿವೃತ್ತಿ ಹೊಂದಿರುವ ಪ್ರಧಾನ ಅಭಿಯಂತರರು/ ಮುಖ್ಯ ಅಭಿಯಂತರರನ್ನು ಅಳವಡಿಸಿಕೊಂಡು ಒಂದು ತಿಂಗಳ ಕಾಲಾವಕಾಶದೊಳಗೆ ವರದಿ ಪಡೆಯಲು ಆದೇಶಿಸಿರುತ್ತಾರೆ. ಸದರಿ ವರದಿಯಲ್ಲಿ ನಿರ್ದಿಷ್ಟ ಪ್ರಕರಣಗಳಲ್ಲಿ ಅಪರಾಧ ಎಸಗಿದೆ ಎಂದು ಮೇಲ್ನೋಟಕ್ಕೆ ಕಂಡುಬಂದಲ್ಲಿ ಅಂತಹ ಪ್ರಕರಣಗಳ ಕುರಿತು ಪ್ರಮುಖ 05 ಇಲಾಖೆಗಳಾದ, ಲೋಕೋಪಯೋಗಿ ಇಲಾಖೆ; ಜಲಸಂಪನ್ಮೂಲ ಇಲಾಖೆ; ನಗರಾಭಿವೃದ್ಧಿ ಇಲಾಖೆ; ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ; ಸಣ್ಣ ನೀರಾವರಿ ಇಲಾಖೆಗಳು ಎಫ್.ಐ.ಆರ್. ಗಳನ್ನು ದಾಖಲಿಸಲು ಕ್ರಮಜರುಗಿಸುವಂತೆ ಮಾನ್ಯ ಮುಖ್ಯಮಂತ್ರಿಯವರು ಸೂಚಿಸಿರುತ್ತಾರೆ. ಸದರಿ ಎಫ್.ಐ.ಆರ್ ಗಳನ್ನು ದಾಖಲಿಸಿದ ನಂತರವಷ್ಟೆ ವಿಶೇಷ ತನಿಖಾ ದಳವನ್ನು ರಚಿಸಬಹುದಾಗಿರುತ್ತದೆ. <br><br> **2.** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಾಮಗಾರಿಗಳ ಅವ್ಯವಹಾರ / ಭ್ರಷ್ಟಾಚಾರದ ಆರೋಪಗಳ ಕುರಿತು ಗೌರವಾನ್ವಿತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್, ವಿಚಾರಣಾ ಆಯೋಗದ ವರದಿಯನ್ನು ಸನ್ಮಾನ್ಯ ಮುಖ್ಯಮಂತ್ರಿಗಳಿಗೆ ದಿನಾಂಕ: 30.08.2025 ರಂದು ಸಲ್ಲಿಸಿರುತ್ತಾರೆ. ಸಚಿವ ಸಂಪುಟವು ವಿಚಾರಣಾ ಆಯೋಗದ ವರದಿಯನ್ನು ಅಂಗೀಕರಿಸಿ, ವಿಚಾರಣಾ ವರದಿಯಲ್ಲಿನ ಎಲ್ಲಾ ಸಲಹೆ/ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ನಿರ್ಣಯವನ್ನು ಕೈಗೊಂಡಿರುತ್ತದೆ. ಒಳಾಡಳಿತ ಇಲಾಖೆಯಿಂದ ನಗರಾಭಿವೃದ್ಧಿ ಇಲಾಖೆಗೆ ಅನಧಿಕೃತ ಟಿಪ್ಪಣಿ ಸಂಖ್ಯೆ:ಹೆಚ್‌ಡಿ 98 ಪಿಸಿಇ 2023, ದಿನಾಂಕ: 09.09.2025 ರಲ್ಲಿ ಸಚಿವ ಸಂಪುಟದ ನಿರ್ಣಯವನ್ನು ಅನುಷ್ಠಾನಗೊಳಿಸಲು ತಿಳಿಸಲಾಗಿರುತ್ತದೆ. ಈ ಬಗ್ಗೆ ನಗರಾಭಿವೃದ್ಧಿ ಇಲಾಖೆಯು ಪರಿಶೀಲಿಸುತ್ತಿದೆ. <br><br> **3.** ಕೋವಿಡ್-19 ಸಾಂಕ್ರಾಮಿಕ ರೋಗದ ನಿವಾರಣೆ |
| ಇ) | ಎಷ್ಟು ವರದಿಗಳನ್ನು ಸರ್ಕಾರ ಅಂಗೀಕರಿಸಿದೆ; ಎಷ್ಟು ಪರಿಶೀಲನೆಯ ಹಂತದಲ್ಲಿವೆ ; ಈ ವರದಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು) | |

ಅನುಬಂಧ - 1



**ಕರ್ನಾಟಕ ಸರ್ಕಾರ**

ಸಂಖ್ಯೆ: ಒಇ 98 ಪಿಸಿಇ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 25-08-2023

**ಅಧಿಸೂಚನೆ**

ಕರ್ನಾಟಕ ಸ್ಟೇಟ್ ಕಂಟ್ರ್ಯಾಕ್ಟರ್ ಅಸೋಸಿಯೇಷನ್ ಅಧ್ಯಕ್ಷರಾದ ಶ್ರೀ ಡಿ.ಕೆಂಪಣ್ಣ ಇವರು ಮಾನ್ಯ ಪ್ರಧಾನ ಮಂತ್ರಿಗಳಿಗೆ ಹಾಗೂ ನಿಕಟಪೂರ್ವ ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಪತ್ರಗಳನ್ನು ಸಲ್ಲಿಸಿ, ರಾಜ್ಯದಲ್ಲಿ ಪ್ರಮುಖ ಕಾಮಗಾರಿಗಳನ್ನು ನಡೆಸುವ ಇಲಾಖೆಗಳಲ್ಲಿ ನಡೆಯುತ್ತಿರುವ ಪ್ಯಾಕೇಜ್ ಪದ್ಧತಿ; ಬಾಕಿ ಮೊತ್ತ ಬಿಡುಗಡೆ ಮತ್ತು ಟೆಂಡರ್ ಪ್ರಕ್ರಿಯೆ, ಇತ್ಯಾದಿಗಳಲ್ಲಿ 40%ಕ್ಕಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಲಂಚಗುಳಿತನ/ ಭ್ರಷ್ಟಾಚಾರ ನಡೆಯುತ್ತಿರುವುದಾಗಿ ವಿವರಿಸಿದ್ದರು. ಈ ಮನವಿಗಳಲ್ಲಿ ಪ್ರಮುಖವಾಗಿ ಕಾಮಗಾರಿಗಳನ್ನು ಪ್ರಾರಂಭಿಸುವ ಪೂರ್ವದಲ್ಲಿಯೇ 25% ರಿಂದ 30%ರವರೆಗೆ ಕೆಲವು ಸಾರ್ವಜನಿಕ ಪ್ರತಿನಿಧಿಗಳಿಗೆ ಮತ್ತು ಇತರರಿಗೆ ಲಂಚ ನೀಡಬೇಕಾದ ಸ್ಥಿತಿಯ ಬಗ್ಗೆ; ಕಾಮಗಾರಿಗಳು ಪೂರ್ಣವಾದ ನಂತರ ಬಾಕಿ ಬಿಲ್ಲುಗಳನ್ನು ತೀರುವಳಿ ಮಾಡಲು 5% ರಿಂದ 6%ರವರೆಗೆ ಎಲ್.ಓ.ಸಿ. ಬಿಡುಗಡೆಗೆ; ಹೊರ ರಾಜ್ಯದ ಗುತ್ತಿಗೆದಾರರಿಗೆ ಪ್ಯಾಕೇಜ್ ಪದ್ಧತಿಯಿಂದ ಅನುಕೂಲ ಮಾಡಲಾಗುತ್ತಿರುವ ಬಗ್ಗೆ ಹಾಗೂ ಪ್ರಮುಖವಾಗಿ 40%ರಷ್ಟು ಕಮಿಷನ್ ಕೇಳುತ್ತಿರುವ ಬಗ್ಗೆ ಸಾಧ್ಯಂತವಾಗಿ ವಿವರಿಸಿದ್ದರು.

ಆದರೆ, ಇದುವರೆವಿಗೂ ಈ ಗಂಭೀರ ಆರೋಪಗಳ ಬಗ್ಗೆ ಸರ್ಕಾರದ ಮಟ್ಟದಲ್ಲಿ ಯಾವುದೇ ತನಿಖೆ ನಡೆದಿರುವುದಿಲ್ಲ.

ಈ ಹಿನ್ನೆಲೆಯಲ್ಲಿ, ಹೆಚ್ಚಿನ ಪ್ರಮಾಣದಲ್ಲಿ ಕಾಮಗಾರಿ ನಡೆಸುವ ಇಲಾಖೆಗಳಾದ ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಸಣ್ಣ ನೀರಾವರಿ ಇಲಾಖೆಗಳಲ್ಲಿ ನಡೆಸುವ ಟೆಂಡರ್ ಪ್ರಕ್ರಿಯೆ, ಪ್ಯಾಕೇಜ್ ಪದ್ಧತಿ, ಪುನರ್ ಅಂದಾಜು (Revised Estimate), ಬಾಕಿ ಮೊತ್ತ ಬಿಡುಗಡೆ ಇತ್ಯಾದಿ ವಿಷಯಗಳಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದ ಕುರಿತು ದೂರುದಾರರಾದ ಶ್ರೀ ಡಿ.ಕೆಂಪಣ್ಣ, ಅಧ್ಯಕ್ಷರು, ಕರ್ನಾಟಕ ಸ್ಟೇಟ್ ಕಂಟ್ರ್ಯಾಕ್ಟರ್ ಅಸೋಸಿಯೇಷನ್ ಇವರ ಆರೋಪದ ಕುರಿತು ಸತ್ಯಾಸತ್ಯತೆಯನ್ನು ಪರಿಶೀಲಿಸಲು ತನಿಖೆಯ ಅಗತ್ಯವಿರುವುದನ್ನು ಮನಗಂಡು Commissions of Inquiry Act 1952 ರ ನಿಯಮ 3ರ ಉಪ ನಿಯಮ 1ರನ್ವಯ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಿಂದ ತನಿಖೆಯನ್ನು ನಡೆಸಲು ವಿಚಾರಣಾ ಆಯೋಗವನ್ನು ರಚಿಸಲು ಸರ್ಕಾರವು ನಿರ್ಧರಿಸಿದೆ.

ಈ ಹಿಂದೆ ಇದೇ ವಿಷಯವಾಗಿ ತನಿಖೆ ನಡೆಸಲು ತನಿಖಾ ಸಮಿತಿ ರಚಿಸಿ ಆದೇಶಿಸಿದ್ದ ಸರ್ಕಾರದ ಆದೇಶ ಸಂಖ್ಯೆ: ಲೋಇ 526 ಸಿಆರ್ಎಂ 2023, ದಿನಾಂಕ:17.08.2023ನ್ನು ರದ್ದುಪಡಿಸಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಸ್ಟೇಟ್ ಕಂಟ್ರ್ಯಾಕ್ಟರ್ ಅಸೋಸಿಯೇಷನ್, ಬೆಂಗಳೂರು ಇವರು ಸಲ್ಲಿಸಿರುವ ಮನವಿಯಲ್ಲಿನ ಆರೋಪಗಳ ಕುರಿತು ತನಿಖೆಯನ್ನು ನಡೆಸಲು ಅನುವಾಗುವಂತೆ Commissions of Inquiry Act 1952 (Central Act LX of 1952) ರ ನಿಯಮ 3ರ ಉಪ ನಿಯಮ 1ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಸರ್ಕಾರವು ಮಾನ್ಯ ಕರ್ನಾಟಕ ಉಚ್ಚ

ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಹೆಚ್.ಎನ್. ನಾಗಮೋಹನದಾಸ್ ರವರ ನೇತೃತ್ವದಲ್ಲಿ ವಿಚಾರಣಾ ಆಯೋಗವನ್ನು ನೇಮಿಸಿದೆ.

ಮಾನ್ಯ ಆಯೋಗದ ತನಿಖಾ ವ್ಯಾಪ್ತಿಗೆ (Terms of Referrence) ವಹಿಸಲಾಗಿರುವ ಅಂಶಗಳು ಈ ಕೆಳಕಂಡಂತಿರುತ್ತದೆ.

1) ಹೆಚ್ಚಿನ ಪ್ರಮಾಣದಲ್ಲಿ ಕಾಮಗಾರಿಗಳನ್ನು ನಡೆಸುವ ಇಲಾಖೆಗಳಾದ ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಸಣ್ಣ ನೀರಾವರಿ ಇಲಾಖೆಗಳಲ್ಲಿ ಟೆಂಡರ್ ಪ್ರಕ್ರಿಯೆ, ಪ್ಯಾಕೇಜ್ ಪದ್ಧತಿ, ಪುನರ್ ಅಂದಾಜು (Revised Estimate), ಬಾಕಿ ಮೊತ್ತ ಬಿಡುಗಡೆ ಇತ್ಯಾದಿ ವಿಷಯಗಳಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದ ಕುರಿತು ಸ್ಥಳ ಹಾಗೂ ದಾಖಲಾತಿಗಳ ಪರಿಶೀಲನೆಯೊಂದಿಗೆ ವಿವರವಾದ ತನಿಖೆಯನ್ನು ನಡೆಸಿ, ಲೋಪ-ದೋಷಗಳ ಮಾಹಿತಿ ಹಾಗೂ ತತ್ಸಂಬಂಧಿತ ಆರೋಪಿತರ ಸ್ಪಷ್ಟ ಗುರುತಿಸುವಿಕೆಯ ಸಹಿತ ಪರಿಪೂರ್ಣ ತನಿಖೆಯನ್ನು ನಡೆಸುವುದು.
2) ಮಾನ್ಯ ಆಯೋಗವು ಮೇಲಿನ ಕಾರ್ಯ ವ್ಯಾಪ್ತಿಯ ಜೊತೆಗೆ ಅಧ್ಯಕ್ಷರು, ಕರ್ನಾಟಕ ಸ್ಟೇಟ್ ಕಂಟ್ರ್ಯಾಕ್ಟರ್ ಅಸೋಸಿಯೇಷನ್ ಇವರ ಮನವಿಗಳು / ದೂರು ಅರ್ಜಿಗಳಲ್ಲಿನ ಎಲ್ಲಾ ಅಂಶಗಳನ್ನೂ ಸಹ ಸವಿವರವಾಗಿ ತನಿಖಾ ವ್ಯಾಪ್ತಿಯಲ್ಲಿ ಪರಿಶೀಲಿಸಲು ಸೂಚಿಸಿದೆ.
3) ಅಲ್ಲದೆ, ತನಿಖೆಯ ವ್ಯಾಪ್ತಿಯಲ್ಲಿ ಪ್ರಮುಖವಾಗಿ ಕೆಳಕಂಡ ಅಂಶಗಳನ್ನೂ ಸಹ ಪರಾಮರ್ಶಿಸುವುದು

   i. ಯೋಜನೆ/ಕಾಮಗಾರಿಗಳಿಗೆ ನಿಯಮಾನುಸಾರ ಆಡಳಿತಾತ್ಮಕ ಅನುಮೋದನೆ ನೀಡಿರುವ ಬಗ್ಗೆ.
   ii. ಅನುಷ್ಠಾನಗೊಳಿಸಲಾದ ಕಾಮಗಾರಿ/ ಯೋಜನೆಗಳ ಗುಣಮಟ್ಟ.
   iii. ಕಾಮಗಾರಿಗಳ ಅಂದಾಜುಗಳನ್ನು ನಿಯಮಗಳ ಪ್ರಚಲಿತ ಅನುಸೂಚಿ ದರಗಳ ಅನುಸಾರವಾಗಿ ತಯಾರಿಸಿರುವ ಬಗ್ಗೆ.
   iv. ಕಾಮಗಾರಿಗಳ ಅಂದಾಜಿನಲ್ಲಿನ ಪರಿಮಾಣ (Quantity) ವಾಸ್ತವಿಕವಾಗಿದೆಯೇ ಅಥವಾ ಕೃತಕವಾಗಿ ಹೆಚ್ಚಿಸಲಾಗಿದೆಯೇ? ಹೆಚ್ಚಿಸಿದ್ದಲ್ಲಿ, ಅವುಗಳ ಪ್ರಮಾಣ ಮತ್ತು ಹಣಕಾಸಿನ ಬದ್ಧತೆಯ ಜೊತೆಗೆ ಯಾವ ಹಂತದಲ್ಲಿ ಹೆಚ್ಚಿಸಲಾಗಿದೆ ಎಂಬುದನ್ನು ಪರೀಕ್ಷಿಸುವುದು.
   v. ಕಾಮಗಾರಿಗಳ ಅನುಷ್ಠಾನದ ಸಂದರ್ಭದಲ್ಲಿ ಉಂಟಾಗಿರುವ ಹೆಚ್ಚುವರಿ ವ್ಯತ್ಯಾಸದ (Variation) ಅನಿವಾರ್ಯತೆ ಮತ್ತು ಅಗತ್ಯತೆ; ಅನಿವಾರ್ಯವಾಗಿದ್ದಲ್ಲಿ, ಮೂಲ ಅಂದಾಜಿನಲ್ಲಿ ಕೈಬಿಡಲು ಕಾರಣಗಳು ಹಾಗೂ ಇವುಗಳಿಗೆ ಸಕ್ಷಮ ಪ್ರಾಧಿಕಾರವು ಅನುಮೋದನೆ ನೀಡಿರುವ ಬಗ್ಗೆ.
   vi. ಯಾವುದಾದರೂ ಕಾಮಗಾರಿಗಳನ್ನು ನಿರ್ವಹಿಸದೆಯೇ ಬಿಲ್ಲು ಪಾವತಿ ಮಾಡಲಾಗಿದೆಯೇ ಅಥವಾ ಅನುಷ್ಠಾನವಾದ ಕಾಮಗಾರಿಗಳ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ಬಿಲ್ಲು ಪಾವತಿಸಲಾಗಿದೆಯೇ?
   vii. ಈ ಕಾಮಗಾರಿಗಳ ಟೆಂಡರ್‌ಗಳನ್ನು ಕರೆಯುವಾಗ ಕೆಲವೇ ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಹಾಗೂ ಉಳಿದ ಗುತ್ತಿಗೆದಾರರು ಟೆಂಡರ್ ಪ್ರಕ್ರಿಯೆಗಳಲ್ಲಿ ಭಾಗವಹಿಸದಂತೆ ಷರತ್ತುಗಳನ್ನು ರೂಪಿಸಲಾಗಿತ್ತೇ ಎಂಬ ಅಂಶಗಳ ಬಗ್ಗೆ.
   viii. ಕಾಮಗಾರಿಯನ್ನು ಪ್ರಾರಂಭಿಸುವ ಮೊದಲು ಸಾಮಗ್ರಿಗಳು, ಉಪಕರಣಗಳು,ಇತ್ಯಾದಿಗಳ ಗುಣಮಟ್ಟ ಪರೀಕ್ಷೆಯನ್ನು ನಿರ್ದಿಷ್ಟಪಡಿಸಿ ಅಧಿಕೃತ ಏಜೆನ್ಸಿಗಳಿಂದ ಮಾಡಿಸಲಾಗಿದೆಯೇ?

ದಾಖಲಾತಿಗಳು / ಇತ್ಯಾದಿಗಳನ್ನು ಒದಗಿಸತಕ್ಕದ್ದು ಹಾಗೂ ಸ್ಥಳ ತನಿಖೆ ಸಂದರ್ಭದಲ್ಲಿ ಖುದ್ದು ಹಾಜರಿದ್ದು, ವಿಚಾರಣಾ ಆಯೋಗದೊಂದಿಗೆ ಸಂಪೂರ್ಣವಾಗಿ ಸಹಕರಿಸತಕ್ಕದ್ದು.

5. ವಿಚಾರಣಾ ಆಯೋಗಕ್ಕೆ ಅಗತ್ಯವಿರುವ ಸಿಬ್ಬಂದಿ, ಸಾಮಗ್ರಿಗಳು, ವಾಹನಗಳ ವ್ಯವಸ್ಥೆ ಹಾಗೂ ಕಛೇರಿ ಮತ್ತು ಅಗತ್ಯ ಸಲಕರಣೆಗಳನ್ನು ಒದಗಿಸತಕ್ಕದ್ದು. ಆಯೋಗಕ್ಕೆ ಭತ್ಯೆ, ಸೌಲಭ್ಯಗಳನ್ನು ನಿಯಮಾನುಸಾರ ಕಲ್ಪಿಸುವುದು.

6. ಸದರಿ ವಿಚಾರಣಾ ಆಯೋಗಕ್ಕೆ ಅಗತ್ಯವಿದ್ದಲ್ಲಿ, ಅಧ್ಯಕ್ಷರ ಕೋರಿಕೆಯ ಮೇರೆಗೆ ಗುಣಮಟ್ಟ ಪರೀಕ್ಷೆಗೆ ನೋಂದಾಯಿತ 3ನೇ ಸ್ವತಂತ್ರ ಸಂಸ್ಥೆಯ (3rd Party Assistance) ವ್ಯವಸ್ಥೆ ಕಲ್ಪಿಸಲು ಅಗತ್ಯ ಕ್ರಮ ವಹಿಸುವುದು.

7. ಆಯೋಗವು ಬೆಂಗಳೂರು ಕೇಂದ್ರ ಸ್ಥಾನದಲ್ಲಿ ಕಾರ್ಯನಿರ್ವಹಿಸಲು ಅನುಕೂಲವಾಗುವಂತೆ ಕಛೇರಿಗೆ ಸ್ಥಳಾವಕಾಶ ಮಾನ್ಯ ಆಯೋಗದ ಮಾನ್ಯ ನ್ಯಾಯಾಧೀಶರಿಗೆ, ಆಯೋಗದ ಕಾರ್ಯದರ್ಶಿಯವರಿಗೆ ಹಾಗೂ ಅಧಿಕಾರಿ / ಸಿಬ್ಬಂದಿಗಳಿಗೆ ವಾಹನಗಳು, ಪೀಠೋಪಕರಣಗಳು, ದೂರವಾಣಿ ವ್ಯವಸ್ಥೆ, ಇತ್ಯಾದಿ ಸೌಲಭ್ಯಗಳನ್ನು ಒದಗಿಸಲು ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರು ಕ್ರಮ ಕೈಗೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
**(ರಾಜಶೇಖರ ಎಂ.ಜಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ(ಕಾನೂನು ಮತ್ತು ಸುವ್ಯವಸ್ಥೆ)

**PR-1066**

**GOVERNMENT OF KARNATAKA**

No.DPAR 08 PRJ 2023

Karnataka Government Secretariat
M.S. Building
Bangalore, dated: 16-08-2023

**CORRIGENDUM**

In the Schedule "A" of the Notification No. DPAR 08 PRJ 2023, dated 18-05-2023, the words "**in Property Registration Application**" be read as "**for establishing the identity of candidates during various stages of the process of selection and recruitment to post under various departments of the Government of Karnataka by Karnataka Public Service Commission**".

By order and in the name of the
Governor of Karnataka,
(R.SHANTHI)
The Under Secretary to Government
Department of Personnel and
Administrative Reforms,
(e-Governance)

**PR-1067**

ಅನುಬಂಧ-2

ಕರ್ನಾಟಕ ಸರ್ಕಾರ

ಸಂಖ್ಯೆ: ಒಇ 98 ಪಿಸಿಇ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:06.10.2023

## ಅಧಿಸೂಚನೆ

ಸರ್ಕಾರದ ಅಧಿಸೂಚನೆ ಸಂಖ್ಯೆ: ಒಇ 98 ಪಿಸಿಇ 2023, ದಿನಾಂಕ: 25.08.2023ರಲ್ಲಿನ ಮಾನ್ಯ ಆಯೋಗದ ತನಿಖಾ ವ್ಯಾಪ್ತಿಗೆ (Terms of Reference) ವಹಿಸಲಾಗಿರುವ ಅಂಶಗಳ ಕ್ರಮ ಸಂಖ್ಯೆ (1)ರ ನಂತರ ಈ ಕೆಳಕಂಡ ಉಪ ಅಂಶಗಳನ್ನು ಸೇರಿಸಿ ಓದಿಕೊಳ್ಳತಕ್ಕದ್ದು.

I. ನಗರಾಭಿವೃದ್ಧಿ ಇಲಾಖೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಕಾಮಗಾರಿಗಳ ಲಂಚಗುಳಿತನ / ಭ್ರಷ್ಟಾಚಾರದ ಬಗ್ಗೆ ತನಿಖೆಗೆ ಎಸ್.ಐ.ಟಿ. ರಚಿಸಿದ್ದು, ನಗರಾಭಿವೃದ್ಧಿ ಇಲಾಖೆಯ ಯಾವ ಯಾವ ಸಂಸ್ಥೆಗಳ ಅವ್ಯವಹಾರವನ್ನು ತನಿಖೆಗೆ ಒಳಪಡಿಸಬೇಕು ಎಂಬ ಪ್ರಶ್ನೆಗೆ ಕಾಮಗಾರಿಗಳ ಬಿಲ್ ಮಂಜೂರು ಮಾಡಲು ಕಮಿಷನ್ ನೀಡುವ ಆರೋಪಕ್ಕೆ ಸಂಬಂಧಿಸಿದಂತೆ ವಿಚಾರಣೆ ಆಯೋಗಕ್ಕೆ ವಹಿಸಲಾಗಿರುವ ಬಿ.ಬಿ.ಎಂ.ಪಿ, ಬಿ.ಡಿ.ಎ, ಲೋಕೋಪಯೋಗಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಜಲಸಂಪನ್ಮೂಲ ಇಲಾಖೆಗೆ ಸಂಬಂಧಪಟ್ಟಂತೆ ಕಾಮಗಾರಿಗಳ ವ್ಯವಹಾರಗಳಿಗೆ ಕಮಿಷನ್ ಪಡೆದಿರುವ ಆರೋಪಕ್ಕೆ ಸಂಬಂಧಿಸಿದಂತೆ ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಎಲ್ಲಾ ವಿಭಾಗಗಳ ಅವ್ಯವಹಾರಗಳನ್ನು ಕೇಳಿಬಂದಿರುವ ಭ್ರಷ್ಟಚಾರದ ಆರೋಪಗಳನ್ನು ಸಮಗ್ರ ವಿಚಾರಣೆ ನಡೆಸಿ, ಸೂಕ್ತ ಕ್ರಮ ಜರುಗಿಸಲು ವಿಚಾರಣಾ ಆಯೋಗ ಶಿಫಾರಸ್ಸು ಮಾಡತಕ್ಕದ್ದು.

II. ಪ್ರಥಮವಾಗಿ ಈ ವಿಚಾರಣೆಯನ್ನು ದಿನಾಂಕ 26.07.2019 ರಿಂದ 31.03.2023ರ ಅವಧಿಯಲ್ಲಿ ನಡೆದಿರುವ ಕಾಮಗಾರಿಗಳನ್ನು ತನಿಖೆಗೆ ಒಳಪಡಿಸುವುದು.

III. ಈ ತನಿಖೆಗೆ ಯಾವುದೇ ರೀತಿಯ ಕನಿಷ್ಠ ಹಾಗೂ ಗರಿಷ್ಠ ಮೊತ್ತವನ್ನು ನಿರ್ದಿಷ್ಟವಾಗಿ ನಿಗದಿಪಡಿಸಿಲ್ಲದ ಕಾರಣ, ತನಿಖಾ ವ್ಯಾಪ್ತಿಗೆ ವಹಿಸಿದ (Terms of Reference) ಎಲ್ಲಾ ಮೊತ್ತದ ಕಾಮಗಾರಿಗಳಿಗೆ ಸಂಬಂಧಿಸಿದ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
Banadarangaiah NR
**(ಬಾಣದರಂಗಯ್ಯ ಎನ್.ಆರ್)** 06/10/23
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಒಳಾಡಳಿತ ಇಲಾಖೆ(ಕಾನೂನು ಮತ್ತು ಸುವ್ಯವಸ್ಥೆ)

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

ಅನುಬಂಧ - 3

ಕರ್ನಾಟಕ ಸರ್ಕಾರ

ಸಂಖ್ಯೆ: ಹೆಚ್ ಡಿ 99 ಪಿಸಿಇ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:07.10.2023

## ಅಧಿಸೂಚನೆ

ಸರ್ಕಾರದ ಅಧಿಸೂಚನೆ ಸಂಖ್ಯೆ:ಹೆಚ್‌ಡಿ 99 ಪಿಸಿಇ 2023, ದಿನಾಂಕ:25.08.2023ರಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ನಿವಾರಣೆ ಹಾಗೂ ತಡೆಗಟ್ಟುವಿಕೆ ಸಂಬಂಧವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ಇತರೆ ಇಲಾಖೆಗಳು ಹಾಗೂ ಈ ಇಲಾಖೆಗಳ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಂಸ್ಥೆಗಳಲ್ಲಿ ಔಷಧಿ, ಉಪಕರಣಗಳು ಹಾಗೂ ಸಾಮಗ್ರಿಗಳ ಖರೀದಿ, ಆಮ್ಲಜನಕ ನಿರ್ವಹಣೆ, ಆಮ್ಲಜನಕ ಕೊರತೆಯಿಂದ ಉಂಟಾದ ಸಾವುಗಳು ಹಾಗೂ ಇತ್ಯಾದಿ ವಿಷಯಗಳ ಕುರಿತು 2021ರ ಜುಲೈ- ಆಗಸ್ಟ್‌ನಲ್ಲಿ ನಡೆದ ಸಾರ್ವಜನಿಕ ಲೆಕ್ಕಪತ್ರ ಸಮಿತಿಯು ನೀಡಿರುವ ವರದಿಯಲ್ಲಿನ ಗಂಭೀರವಾದ ಆರೋಪಗಳ ಬಗ್ಗೆ ತನಿಖೆಯನ್ನು ನಡೆಸಲು Commission of Inquiry Act 1952 ರ ನಿಯಮ 3 ಉಪನಿಯಮ 1 ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಸರ್ಕಾರವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ಇವರ ನೇತೃತ್ವದಲ್ಲಿ ವಿಚಾರಣಾ ಆಯೋಗವನ್ನು ನೇಮಿಸಲಾಗಿದ್ದು, ಈ ಮಾನ್ಯ ಆಯೋಗದ ತನಿಖಾ ವ್ಯಾಪ್ತಿಗೆ ವಹಿಸಲಾಗಿರುವ (Terms of References) ಅಂಶಗಳನ್ನು ಈ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಿದೆ.

1. ವಿಧಾನಸಭೆಯ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ (PAC) 2020-2021 ಸಲ್ಲಿಸಿದ ವರದಿಯಲ್ಲಿ ಪ್ರಸ್ತಾಪಿಸಿದ ವಿಷಯಗಳನ್ನು ಪರಿಶೀಲಿಸಲು ಮತ್ತು ಕೆ.ಟಿ.ಪಿ.ಪಿ. ಕಾಯಿದೆ ಮತ್ತು ನಿಯಮಗಳನ್ನು ಉಲ್ಲಂಘಿಸಿ ಸಕ್ಷಮ ಅಧಿಕಾರಿಗಳು ನೀಡಿದ ಆಡಳಿತಾತ್ಮಕ ಅನುಮೋದನೆಯನ್ನು ಉಲ್ಲಂಘಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ಇತರ ಇಲಾಖೆಗಳ ಅಧೀನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಂಸ್ಥೆಗಳಲ್ಲಿ ಔಷಧಿ ಆಮ್ಲಜನಕದ ಉಪಕರಣಗಳು, ಸಾಮಗ್ರಿಗಳ ಖರೀದಿ, ವಿತರಣೆ ನಿರ್ವಹಣೆಯಲ್ಲಿ ನಡೆದಿರುವಂತಹ ಅವ್ಯವಹಾರಗಳು ಹಾಗೂ ಲೋಪದೋಷಗಳ ಸಮಗ್ರ ತನಿಖೆ ನಡೆಸುವುದು.
2. ಕಿದ್ವಾಯಿ ಸಂಸ್ಥೆಗೆ ಸಂಬಂಧಪಟ್ಟಂತೆ ಟೆಂಡರ್‌ಗಳು, ನೇಮಕಾತಿಗಳು, ಔಷಧಿ, ಉಪಕರಣಗಳು, ವೆಂಟಿಲೇಟರುಗಳು, ಆಕ್ಸಿಜನ್ ಘಟಕದ ನಿರ್ವಹಣೆ ಇವುಗಳ ಅವ್ಯವಹಾರಗಳ ಬಗ್ಗೆ ಸಮಗ್ರ ತನಿಖೆ ನಡೆಸುವುದು.
3. ವಿಧಾನಸಭೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ (PAC) ಸಲ್ಲಿಸಿದ ವರದಿಯಲ್ಲಿ ಪ್ರಸ್ತಾಪಿಸಲಾದ ವಿಷಯಗಳನ್ನು ಪರಿಶೀಲಿಸಲು ಮತ್ತು ಕೆಟಿಪಿಪಿ ಕಾಯಿದೆ ಮತ್ತು ನಿಯಮಗಳನ್ನು ಉಲ್ಲಂಘಿಸಿ ಅಥವಾ ಸಕ್ಷಮ ಅಧಿಕಾರಿಗಳು ನೀಡಿದ ಆಡಳಿತಾತ್ಮಕ ಅನುಮೋದನೆಯನ್ನು ಉಲ್ಲಂಘಿಸಿ ಮಾಡಿರುವ ವಸ್ತುಗಳ ಖರೀದಿಯ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ತನಿಖೆ ನಡೆಸುವುದು.
4. ಕೋವಿಡ್-19 ಸಾಂಕ್ರಾಮಿಕ ರೋಗವನ್ನು ನಿಭಾಯಿಸಲು ಮಾಡಿದ ಖರೀದಿಗಳ ಕುರಿತು ಕಂಟ್ರೋಲರ್ ಮತ್ತು ಆಡಿಟರ್ ಜನರಲ್ (ಸಿಎಜಿ) ಸಲ್ಲಿಸಿದ ಆಡಿಟ್ ವರದಿಯ ಆಧಾರದ ಮೇಲೆ ಕೆಟಿಪಿಪಿ ಕಾಯಿದೆ ಮತ್ತು ನಿಯಮಗಳನ್ನು ಉಲ್ಲಂಘಿಸಿ ಅಥವಾ ಸಕ್ಷಮ ಪ್ರಾಧಿಕಾರ /

ಅಧಿಕಾರಿಗಳು ನೀಡಿದ ಆಡಳಿತಾತ್ಮಕ ಅನುಮೋದನೆಯನ್ನು ಉಲ್ಲಂಘಿಸಿ ಮಾಡಿದ ವಸ್ತುಗಳ ಖರೀದಿ ಮಾಡಿರುವ ವಸ್ತುಗಳ ಬಗ್ಗೆ ಸಮಗ್ರ ತನಿಖೆ ನಡೆಸುವುದು.

5. ಕೋವಿಡ್-19 ಸಂಬಂಧಿಸಿದಂತೆ, ಕರ್ನಾಟಕ ಗೌರವಾನ್ವಿತ ಉಚ್ಚ ನ್ಯಾಯಾಲಯವು ಸಂಖ್ಯೆ (WP.6435/2020) ಮತ್ತು ಸಂಬಂಧಿತ ವಿಷಯಗಳು ಅಂಗೀಕರಿಸಿದ ಸಂಬಂಧಿತ ಆದೇಶಗಳನ್ನು ಪರಿಶೀಲಿಸಲು ಮತ್ತು ಕೆಟಿಪಿಪಿ ಕಾಯಿದೆ ಮತ್ತು ನಿಯಮಗಳನ್ನು ಉಲ್ಲಂಘಿಸಿ ಅಥವಾ ಸಕ್ಷಮ ಅಧಿಕಾರಿಗಳು ನೀಡಿದ ಆಡಳಿತಾತ್ಮಕ ಅನುಮೋದನೆಯನ್ನು ಉಲ್ಲಂಘಿಸಿ ಪಿಪಿಇ ಕಿಟ್ಸ್, ವೆಂಟಿಲೇಟರ್ ಇತ್ಯಾದಿ ಉಪಕರಣಗಳನ್ನು ಖರೀದಿ ಮಾಡಿರುವ ಬಗ್ಗೆ ಪರಿಶೀಲಿಸಿ ತನಿಖೆ ನಡೆಸುವುದು.
6. ಕೋವಿಡ್-19ಗೆ ಸಂಬಂಧಿಸಿದಂತೆ ನಗರ ಸ್ಥಳೀಯ ಸಂಸ್ಥೆಗಳು ಮತ್ತು ಜಿಲ್ಲೆಗಳಲ್ಲಿ, ಕೆಟಿಪಿಪಿ ಕಾಯಿದೆ ಮತ್ತು ನಿಯಮಗಳನ್ನು ಉಲ್ಲಂಘಿಸಿ ಅಥವಾ ಸಕ್ಷಮ ಅಧಿಕಾರಿಗಳು ನೀಡಿದ ಆಡಳಿತಾತ್ಮಕ ಅನುಮೋದನೆಯನ್ನು ಉಲ್ಲಂಘಿಸಿ ಮಾಡಿರುವ ಖರೀದಿ ಕುರಿತು ಪರಿಶೀಲಿಸಿ ತನಿಖೆ ನಡೆಸುವುದು.
7. ಕೋವಿಡ್-19 ಸಮಯದಲ್ಲಿ ಕೋವಿಡ್ ರೋಗಿಗಳಿಗೆ ಹಾಸಿಗೆ ಹಂಚಿಕೆಯಲ್ಲಿ ಯಾವುದೇ ಮಾನದಂಡಗಳು ಉಲ್ಲಂಘನೆಯಾಗಿದ್ದಲ್ಲಿ ಈ ಕುರಿತು ತನಿಖೆ ನಡೆಸಿ, ಇನ್ನು ಮುಂದೆ ನಿಯಮಗಳು / ಮಾನದಂಡಗಳು ಉಲ್ಲಂಘನೆಯಾಗದಂತೆ ಕೈಗೊಳ್ಳಬಹುದಾದ ಕ್ರಮವನ್ನು ಸೂಚಿಸುವುದು.
8. ಕೋವಿಡ್-19 ಸಮಯದಲ್ಲಿ ಆಮ್ಲಜನಕ ಕೊರತೆ ಹಾಗೂ ನಿರ್ವಹಣೆಯಲ್ಲಿ ನಿಯಮಗಳನ್ನು ಪಾಲಿಸುವಲ್ಲಿ ವಿಫಲರಾಗಿರುವವರ ವಿರುದ್ಧ ಕೈಗೊಳ್ಳಬಹುದಾದ ಕ್ರಮದ ಕುರಿತು ಸಲಹೆ ನೀಡುವುದು.
9. ಕೋವಿಡ್-19 ತಡೆಗಟ್ಟಲು ಹಾಗೂ ನಿರ್ವಹಣೆಯ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಂದ ಸಲ್ಲಿಸಿರುವ ಪ್ರಸ್ತಾವನೆಗಳಿಗೆ ಸರ್ಕಾರದ ಮಟ್ಟದಲ್ಲಿ ಅನುಮೋದನೆ ನೀಡುವಲ್ಲಿ ವಿಳಂಬವಾಗಿದ್ದಲ್ಲಿ ಪರಿಶೀಲಿಸಿ ತನಿಖೆ ನಡೆಸುವುದು.
10. ಮೇಲ್ಕಂಡ ಅಂಶಗಳ ತನಿಖೆಯನ್ನು ಮೊದಲನೇ ಲಾಕ್‌ಡೌನ್ ಪ್ರಾರಂಭವಾದ ದಿನಾಂಕದಿಂದ ದಿನಾಂಕ 31.12.2022 ರವರೆಗೆ ನಡೆದ ಅವಧಿಯಲ್ಲಿನ ಆರೋಪಗಳು/ನಿಯಮ ಉಲ್ಲಂಘನೆ/ ಲೋಪಗಳ ಕುರಿತು ತನಿಖೆ ನಡೆಸುವುದು.
11. ಮೇಲೆ ತಿಳಿಸಲಾದ ವಿಷಯಗಳ ತನಿಖೆಯ ಪರಿಶೀಲನೆಯ ಸಂದರ್ಭದಲ್ಲಿ ಕಂಡುಬರುವ ಇತರೆ ಲೋಪಗಳು/ಉಲ್ಲಂಘನೆಯ ಅಂಶಗಳನ್ನು ಇನ್ನು ಮುಂದೆ ಜರುಗದಂತೆ ವಹಿಸಬಹುದಾದ ಮುನ್ನೆಚ್ಚರಿಕೆಯ ಕ್ರಮಗಳ ಬಗ್ಗೆ ಸೂಕ್ತ ಸಲಹೆಗಳನ್ನು ನೀಡುವುದು.
12. ಕೋವಿಡ್-19ಗೆ ಸಂಬಂಧಿಸಿದಂತೆ ಆಗಿರುವ ಲೋಪದೋಷಗಳ ಬಗ್ಗೆ ಸರ್ಕಾರದಿಂದ ವಹಿಸಬಹುದಾದ ಇತರೆ ವಿಷಯಗಳನ್ನು ವಿಚಾರಣೆ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Banadaranganaiah NR

**(ಬಾಣದರಂಗಯ್ಯ ಎನ್.ಆರ್.)** 07/10/23
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ)
ಒಳಾಡಳಿತ ಇಲಾಖೆ(ಕಾನೂನು ಮತ್ತು ಸುವ್ಯವಸ್ಥೆ)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು (ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಒದಗಿಸುವಂತೆ ಕೋರಿದೆ).

ಪ್ರತಿ:

1. ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕೂನ್ಹಾ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರು, ನಂ. 80, 5ನೇ ಮುಖ್ಯರಸ್ತೆ, A.G's Colony, ಆನಂದನಗರ, ಬೆಂಗಳೂರು-560024.
2. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329 ಬೆಂಗಳೂರು.
3. ರಿಜಿಸ್ಟ್ರಾರ್ ಜನರಲ್, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಬೆಂಗಳೂರು.
8. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಬೆಂಗಳೂರು.
9. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಮಾಗಡಿ ರಸ್ತೆ, ಬೆಂಗಳೂರು.
10. ಸರ್ಕಾರದ ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
11. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯಸೌಧ, ಮಾಗಡಿ ರಸ್ತೆ, ಬೆಂಗಳೂರು.
12. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಮಾಗಡಿ ರಸ್ತೆ, ಬೆಂಗಳೂರು.
13. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
14. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ, ಕೆ.ಆರ್.ವೃತ್ತ, ಬೆಂಗಳೂರು.
15. ಎಲ್ಲಾ ನಿರ್ದೇಶಕರು / ಡೀನ್, ಸರ್ಕಾರಿ ವೈದ್ಯಕೀಯ ಕಾಲೇಜುಗಳು. - ಸರ್ಕಾರದ ಉಪ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ, ಬಹುಮಹಡಿಗಳ ಕಟ್ಟಡ ಇವರ ಮುಖಾಂತರ.
16. ಸರ್ಕಾರದ ಎಲ್ಲಾ ಇಲಾಖೆಗಳ ಆಡಳಿತ ವ್ಯಾಪ್ತಿಯಲ್ಲಿರುವ ಸಂಸ್ಥೆಗಳ ಮುಖ್ಯಸ್ಥರುಗಳಿಗೆ-ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳ ಮುಖಾಂತರ.
17. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
18. ಸರ್ಕಾರದ ಜಂಟಿ ಹಾಗೂ ಉಪ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
19. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
20. ಶಾಖಾ ರಕ್ಷಾ ಕಡತ.

ಅನುಬಂಧ - 4

124

# ಕರ್ನಾಟಕ ಸರ್ಕಾರ

ಸಂಖ್ಯೆ: ಹೆಚ್ ಡಿ 99 ಪಿಸಿಇ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:26.12.2024

## ಅಧಿಸೂಚನೆ

ಸರ್ಕಾರದ ಅಧಿಸೂಚನೆ ಸಂಖ್ಯೆ:ಹೆಚ್‌ಡಿ 99 ಪಿಸಿಇ 2023, ದಿನಾಂಕ:25.08.2023ರಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ನಿವಾರಣೆ ಹಾಗೂ ತಡೆಗಟ್ಟುವಿಕೆ ಸಂಬಂಧವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ಇತರೆ ಇಲಾಖೆಗಳು ಹಾಗೂ ಈ ಇಲಾಖೆಗಳ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಂಸ್ಥೆಗಳಲ್ಲಿ ಔಷಧಿ, ಉಪಕರಣಗಳು ಹಾಗೂ ಸಾಮಗ್ರಿಗಳ ಖರೀದಿ, ಆಮ್ಲಜನಕ ನಿರ್ವಹಣೆ, ಆಮ್ಲಜನಕ ಕೊರತೆಯಿಂದ ಉಂಟಾದ ಸಾವುಗಳು ಹಾಗೂ ಇತ್ಯಾದಿ ವಿಷಯಗಳ ಕುರಿತು 2021ರ ಜುಲೈ-ಆಗಸ್ಟ್‌ನಲ್ಲಿ ನಡೆದ ಸಾರ್ವಜನಿಕ ಲೆಕ್ಕಪತ್ರ ಸಮಿತಿಯು ನೀಡಿರುವ ವರದಿಯಲ್ಲಿನ ಗಂಭೀರವಾದ ಆರೋಪಗಳ ಬಗ್ಗೆ ತನಿಖೆಯನ್ನು ನಡೆಸಲು Commission of Inquiry Act 1952 ರ ನಿಯಮ 3 ಉಪನಿಯಮ 1 ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಸರ್ಕಾರವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ಇವರ ನೇತೃತ್ವದಲ್ಲಿ ವಿಚಾರಣಾ ಆಯೋಗವನ್ನು ನೇಮಿಸಿ, ತನಿಖಾ ಆಯೋಗಕ್ಕೆ Terms of Reference ನಿಗದಿಪಡಿಸಿ, ದಿನಾಂಕ:07.10.2022ರಂದು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.

ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಆಮ್ಲಜನಕ ಕೊರತೆಯಿಂದಾಗಿ ಮರಣ ಹೊಂದಿರುವ ಘಟನೆಗೆ ಸಂಬಂಧಿಸಿದಂತೆ ವಿಚಾರಣೆ ನಡೆಸಲು ನೇಮಿಸಲಾಗಿದ್ದ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಬಿ.ಎ.ಪಾಟೀಲ್ ಇವರ ತನಿಖಾ ವರದಿಯನ್ನು ಒಪ್ಪದೇ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ಇವರ ವಿಚಾರಣಾ ಆಯೋಗಕ್ಕೆ ವಹಿಸುವಂತೆ ಕೋರಿರುತ್ತದೆ. ಅದರಂತೆ ಪರಿಶೀಲಿಸಿ, ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಆಮ್ಲಜನಕ ಕೊರತೆಯಿಂದಾಗಿ ಮರಣ ಹೊಂದಿರುವ ಪ್ರಕರಣದ ಕುರಿತು ವಿಚಾರಣೆ ನಡೆಸಲು ಹಾಲಿ ಅಸ್ತಿತ್ವದಲ್ಲಿರುವ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ ವಿಚಾರಣಾ ಆಯೋಗಕ್ಕೆ ಹೆಚ್ಚುವರಿಯಾಗಿ ವಹಿಸಿ, ಈ ಕೆಳಕಂಡ Terms of Reference ಗಳನ್ನು ನಿಗದಿಪಡಿಸಿದೆ:-

1. ದಿ:03.05.2021ರಂದು ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಕೋವಿಡ್-19 ರೋಗಿಗಳು ಆಮ್ಲಜನಕ ಕೊರತೆಯಿಂದ ಮರಣ ಹೊಂದಿರುವ ಕಾರಣ ಹಾಗೂ ಇದಕ್ಕೆ ಕಾರಣರಾದವರ ಬಗ್ಗೆ ತನಿಖೆ ನಡೆಸುವುದು.
2. ಕೋವಿಡ್-19ರ ಸಮಯದಲ್ಲಿ ಆಮ್ಲಜನಕ ಕೊರತೆ ಹಾಗೂ ನಿರ್ವಹಣೆಯಲ್ಲಿ ನಿಯಮಗಳನ್ನು ಪಾಲಿಸುವಲ್ಲಿ ವಿಫಲರಾಗಿರುವ ಅಧಿಕಾರಿ/ನೌಕರರು ಯಾರು? ಹಾಗೂ ಸದರಿಯವರ ವಿರುದ್ಧ ಕೈಗೊಳ್ಳಬಹುದಾದ ಕ್ರಮದ ಬಗ್ಗೆ ಸಲಹೆ.
3. ಮೇಲೆ ತಿಳಿಸಿರುವ ತನಿಖೆಯ ಪರಿಶೀಲನೆಯ ಸಂದರ್ಭದಲ್ಲಿ ಕಂಡುಬರುವ ಲೋಪದೋಷಗಳು ಇನ್ನು ಮುಂದೆ ಜರುಗದಂತೆ ವಹಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಸೂಕ್ತ ಸಲಹೆ.

4. ಕೋವಿಡ್-19ರ ಸಮಯದಲ್ಲಿ ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಆಮ್ಲಜನಕ ಕೊರತೆಯಿಂದ ಉಂಟಾಗಿರುವ ಮರಣ ಹಾಗೂ ಇತರೆ ಅಂಶಗಳ ಬಗ್ಗೆ, ಸರ್ಕಾರದಿಂದ ವಹಿಸಬಹುದಾದ ಇನ್ನಿತರೆ ವಿಷಯಗಳ ಬಗ್ಗೆ ತನಿಖೆ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ನಾಗರಾಜು ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ(ಕಾನೂನು ಮತ್ತು ಸುವ್ಯವಸ್ಥೆ)
26/12/24

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು (ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಒದಗಿಸುವಂತೆ ಕೋರಿದೆ).

ಪ್ರತಿ:

1. ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕೂನ್ಹಾ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರು, ನಂ. 80, 5ನೇ ಮುಖ್ಯರಸ್ತೆ, A.G's Colony, ಆನಂದನಗರ, ಬೆಂಗಳೂರು-560024.
2. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329 ಬೆಂಗಳೂರು.
3. ರಿಜಿಸ್ಟ್ರಾರ್ ಜನರಲ್, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಬೆಂಗಳೂರು.
8. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಬೆಂಗಳೂರು.
9. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಮಾಗಡಿ ರಸ್ತೆ, ಬೆಂಗಳೂರು.
10. ಸರ್ಕಾರದ ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
11. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯಸೌಧ, ಮಾಗಡಿ ರಸ್ತೆ, ಬೆಂಗಳೂರು.
12. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಮಾಗಡಿ ರಸ್ತೆ, ಬೆಂಗಳೂರು.
13. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
14. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ, ಕೆ.ಆರ್.ವೃತ್ತ, ಬೆಂಗಳೂರು.
15. ಎಲ್ಲಾ ನಿರ್ದೇಶಕರು / ಡೀನ್, ಸರ್ಕಾರಿ ವೈದ್ಯಕೀಯ ಕಾಲೇಜುಗಳು. - ಸರ್ಕಾರದ ಉಪ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ, ಬಹುಮಹಡಿಗಳ ಕಟ್ಟಡ ಇವರ ಮುಖಾಂತರ.

16. ಸರ್ಕಾರದ ಎಲ್ಲಾ ಇಲಾಖೆಗಳ ಆಡಳಿತ ವ್ಯಾಪ್ತಿಯಲ್ಲಿರುವ ಸಂಸ್ಥೆಗಳ ಮುಖ್ಯಸ್ಥರುಗಳಿಗೆ-ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ಮುಖಾಂತರ.
17. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
18. ಸರ್ಕಾರದ ಜಂಟಿ ಹಾಗೂ ಉಪ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
19. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
20. ಶಾಖಾ ರಕ್ಷಾ ಕಡತ.

ಅನುಬಂಧ - 5



ಕರ್ನಾಟಕಸರ್ಕಾರ

ಸಂಖ್ಯೆ: ಹೆಚ್‌ಡಿ 87 ಪಿಸಿಇ 2024

ಕರ್ನಾಟಕಸರ್ಕಾರದಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 23.07.2024.

## ಅಧಿಸೂಚನೆ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆ ವಿಷಯದಲ್ಲಿ ಆರೋಪಗಳು ಸರ್ಕಾರದ ಗಮನಕ್ಕೆ ಬಂದಿದ್ದರಿಂದ ಮತ್ತು ಈ ಕುರಿತು ದಿನ ಪತ್ರಿಕೆಗಳಲ್ಲಿ ಹಾಗೂ ಮಾಧ್ಯಮ ಗಳಲ್ಲಿಯೂ ಸಹ ವರದಿಯಾದ ಹಿನ್ನೆಲೆಯಲ್ಲಿ, ಈ ಪ್ರಕರಣದಲ್ಲಿ ವಿಚಾರಣೆ ನಡೆಸುವುದು ಸೂಕ್ತವೆಂದು ಮನಗಂಡು, Commission of Inquiry Act, 1952ರ ನಿಯಮ 3 ರ ಉಪನಿಯಮ (1)ರನ್ವಯ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಿಂದ ವಿಚಾರಣೆ ನಡೆಸಲು ವಿಚಾರಣಾ ಆಯೋಗವನ್ನು ರಚಿಸಲು ತೀರ್ಮಾನಿಸಿ, ಆರೋಪಗಳ ಸಂಬಂಧ ವಿಚಾರಣೆ ನಡೆಸಲು ದಿನಾಂಕ:14.07.2024ರ ಅಧಿಸೂಚನೆಯಲ್ಲಿ ಸರ್ಕಾರವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಗೌರವಾನ್ವಿತ ನಿವೃತ್ತ ನ್ಯಾಯಾಧೀಶರಾದ **ಶ್ರೀ ಪಿ.ಎನ್.ದೇಸಾಯಿ** ರವರ ನೇತೃತ್ವದಲ್ಲಿ ಏಕಸದಸ್ಯ ವಿಚಾರಣಾ ಆಯೋಗವನ್ನು ರಚಿಸಿ ಆದೇಶ ಹೊರಡಿಸಲಾಗಿತ್ತು.

ಮಾನ್ಯ ಆಯೋಗದ ವ್ಯಾಪ್ತಿಗೆ ವಹಿಸಬಹುದಾದ **ಕಾರ್ಯವ್ಯಾಪ್ತಿ ಮತ್ತು ಷರತ್ತುಗಳನ್ನು (Terms of Reference)** ಈ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಿದೆ:-

1. 2006 ರಿಂದ 2024ರ ಜುಲೈ 15ರ ಅವಧಿಯಲ್ಲಿ ಮುಡಾ ಸಂಸ್ಥೆಯು ಎಷ್ಟು ಬಡಾವಣೆಗಳನ್ನು ರಚಿಸಿದೆ ? ಪ್ರಾಧಿಕಾರವು ರಚಿಸಿದ ಎಲ್ಲಾ ಬಡಾವಣೆಗಳಲ್ಲಿ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಡಿಸದೇ ಭೂಸ್ವಾಧೀನ ಪ್ರಕ್ರಿಯೆಯಿಂದ ಕೈಬಿಟ್ಟಂತಹ ಎಷ್ಟು ಪ್ರಮಾಣದ ಜಮೀನನ್ನು ಬಡಾವಣೆ ರಚನೆಗೆ ಬಳಸಿಕೊಂಡಿದೆಯೇ ?

2. ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಡಿಸದೇ ಮತ್ತು ಭೂಸ್ವಾಧೀನ ಪ್ರಕ್ರಿಯೆಯಿಂದ ಕೈಬಿಟ್ಟಿರುವಂತಹ ಜಮೀನನ್ನು ಬಡಾವಣೆ ರಚನೆಗೆ ಬಳಸಿದ ಪ್ರಕರಣಗಳಲ್ಲಿ ಭೂ ಮಾಲೀಕರಿಗೆ ಪರಿಹಾರವಾಗಿ ನೀಡಿರುವಂತಹ ವಿಧಾನಗಳೇನು ? ಈ ರೀತಿಯಾಗಿ ನೀಡಿರುವ ಪರಿಹಾರಗಳನ್ನು ಕಾನೂನಾತ್ಮಕವಾಗಿ ನೀಡಿರುತ್ತಾರೆಯೇ ?

3. ಭೂಸ್ವಾಧೀನ ಪ್ರಕ್ರಿಯೆಗೆ ಬದ್ಧವಾಗಿರದೆ ಬಡಾವಣೆಗಳ ರಚನೆಗಾಗಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿರುವ, ಭೂಮಿಯನ್ನು ಕಳೆದುಕೊಂಡವರಿಗೆ ನಿವೇಶನಗಳ ರೂಪದಲ್ಲಿ ಪರಿಹಾರವನ್ನು ನೀಡುವುದು ಕಾನೂನಿನ ದೃಷ್ಟಿಯಲ್ಲಿ ಅನುಮತಿಸಲಾಗಿದೆಯೇ ?

4. ಮುಡಾ ಸಂಸ್ಥೆಯಲ್ಲಿ ನಡೆದಿರುವ ಭೂಸ್ವಾಧೀನ ಪ್ರಕ್ರಿಯೆಗಳಲ್ಲಿ, ಬಡಾವಣೆಯ ರಚನೆಯಲ್ಲಿ, ಬದಲಿ ನಿವೇಶನ ಹಂಚಿಕೆಗಳಲ್ಲಿ 2006 ರಿಂದ 2024 ರ ಜುಲೈ 15 ರವರೆಗೆ ನಡೆದಿರಬಹುದಾದ ಎಲ್ಲಾ ಅಕ್ರಮಗಳನ್ನು ಗುರುತಿಸಿ ವರದಿ ಕೊಡುವುದು ಮತ್ತು ಸೂಕ್ತ ಸಲಹೆ ನೀಡುವುದು.

5. ಎಲ್ಲಾ ಅಕ್ರಮ ನಿವೇಶನಗಳು, ಪರ್ಯಾಯ ನಿವೇಶನಗಳು, ಅಕ್ರಮ ಪರಿಹಾರದ ನಿವೇಶನ/ಭೂಮಿ ಮಂಜೂರು ಮಾಡಿದ ಫಲಾನುಭವಿಗಳನ್ನು ಗುರುತಿಸಿ ಮತ್ತು ಅಕ್ರಮಗಳನ್ನು ನಿವಾರಿಸಲು ಮತ್ತು ಜಮೀನುಗಳು/ ನಿವೇಶನಗಳು/ ಪರಿಹಾರವನ್ನು ಮುಡಾಕ್ಕೆ ಮರುಸ್ಥಾಪಿಸಲು ಅಗತ್ಯ ಕ್ರಮಗಳನ್ನು ಸೂಚಿಸುವುದು.

6. ಕಾನೂನು ಬಾಹಿರವಾಗಿ ಪರಿಹಾರದ ರೂಪದಲ್ಲಿ ನಿವೇಶನ/ಜಮೀನನ್ನು ನೀಡಿದ್ದಲ್ಲಿ ಅದನ್ನು ಗುರುತಿಸಿ, ಸೂಕ್ತವಾದ ಕ್ರಮವನ್ನು ಜರುಗಿಸಲು ಸಲಹೆಯನ್ನು ನೀಡುವುದು.

7. ಕಾನೂನಿನಲ್ಲಿ, ಸ್ವಾಧೀನ ಪ್ರಕ್ರಿಯೆಗಳಿಲ್ಲದೆ ಮುಡಾ ಸಂಸ್ಥೆಯು ವಶಪಡಿಸಿಕೊಂಡ ಜಮೀನುಗಳಿಗೆ ಸಂಬಂಧಿಸಿದಂತೆ ಪರಿಹಾರದ ಬದಲಾಗಿ ನಿವೇಶನಗಳನ್ನು ಮಂಜೂರು ಮಾಡಲು ಮುಡಾ ಸಂಸ್ಥೆಯ ವಿವಿಧ ನಿರ್ಣಯಗಳು ಕಾನೂನುಬದ್ಧವಾಗಿದೆಯೇ ಮತ್ತು ಬಂಧನಕಾರವಾಗಿದೆಯೇ (Binding) ?

8. ಪ್ರಾಧಿಕಾರದ ವತಿಯಿಂದ ಸದರಿ ಅವಧಿಯಲ್ಲಿ ಹಂಚಿಕೆ ಮಾಡಿರುವ ಸಿ.ಎ. ನಿವೇಶನಗಳಿಗೆ ಸಂಬಂಧಿಸಿದಂತೆ ನಡೆದಿರುವ ಅಕ್ರಮಗಳ ಬಗ್ಗೆ ವಿಚಾರಣೆಗೊಳಪಡಿಸುವುದು.

ಈ ಮೇಲ್ಕಂಡ ಅಂಶಗಳ ಕುರಿತು ವಿಚಾರಣಾ ಆಯೋಗವು Commissions of inquiry Act 1952 ಹಾಗೂ Code of Civil Procedure ರಲ್ಲಿನ ಅವಕಾಶದಡಿ ತನಿಖೆ ನಡೆಸಲು ಎಲ್ಲಾ ಅಧಿಕಾರವನ್ನು ಹೊಂದಿರುತ್ತದೆ ಹಾಗೂ ತನಿಖೆಯನ್ನು **ಆರು ತಿಂಗಳೊಳಗಾಗಿ** ಪೂರ್ಣಗೊಳಿಸಿ ವರದಿಯನ್ನು ಸಲ್ಲಿಸತಕ್ಕದ್ದೆಂದು ಸರ್ಕಾರವು ಅಪೇಕ್ಷಿಸುತ್ತದೆ.

ಈ ವಿಚಾರಣಾ ಆಯೋಗಕ್ಕೆ ಸಮಗ್ರ ಮಾಹಿತಿ / ದಾಖಲೆಗಳನ್ನು ಒದಗಿಸಿ ಆಯೋಗವು ತನಿಖೆಯನ್ನು ಪೂರ್ಣಗೊಳಿಸಲು ಹಾಗೂ ತಾಂತ್ರಿಕ ಸಲಹೆಗಾರರು / ಆರ್ಥಿಕ ಸಲಹೆಗಾರರು / ಭೂಸ್ವಾಧೀನ ಸಲಹೆಗಾರರು / ಆಡಳಿತಾತ್ಮಕ ಸಲಹೆಗಾರರನ್ನು ಒದಗಿಸಲು **ನಗರಾಭಿವೃದ್ಧಿ ಇಲಾಖೆಯು ಸಹಕರಿಸತಕ್ಕದ್ದು**.

ವಿಚಾರಣಾ ಆಯೋಗಕ್ಕೆ ಸಂಬಂಧಪಟ್ಟಂತೆ ನಗರಾಭಿವೃದ್ಧಿ ಇಲಾಖೆಯ ಸಂಬಂಧಿಸಿದ ಅಧಿಕಾರಿಗಳು ಆಯೋಗವು ಕಾಲಾನುಕಾಲಕ್ಕೆ ತನಿಖೆಗಾಗಿ ಅಪೇಕ್ಷಿಸುವ ಎಲ್ಲಾ ಕಡತಗಳು/ ದಾಖಲಾತಿಗಳು / ವಹಿಗಳು ಇತ್ಯಾದಿಗಳನ್ನು ಒದಗಿಸತಕ್ಕದ್ದು ಹಾಗೂ ಸ್ಥಳ ತನಿಖೆ ಸಂದರ್ಭದಲ್ಲಿ ಖುದ್ದು ಹಾಜರಿದ್ದು, ವಿಚಾರಣಾ ಆಯೋಗದೊಂದಿಗೆ ಸಂಪೂರ್ಣವಾಗಿ ಸಹಕರಿಸತಕ್ಕದ್ದು.

ಆಯೋಗವು ಬೆಂಗಳೂರು ಕೇಂದ್ರ ಸ್ಥಾನದಲ್ಲಿ / ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸಲು ಅನುಕೂಲವಾಗುವಂತೆ ಕಛೇರಿಗೆ ಸ್ಥಳಾವಕಾಶ ಮಾನ್ಯ ಆಯೋಗದ ಮಾನ್ಯ ನ್ಯಾಯಾಧೀಶರಿಗೆ ಆಯೋಗದ ಕಾರ್ಯದರ್ಶಿಯವರಿಗೆ ಹಾಗೂ ಅಧಿಕಾರಿ / ಸಿಬ್ಬಂದಿಗಳಿಗೆ ವಾಹನಗಳು, ಪೀಠೋಪಕರಣಗಳು, ದೂರವಾಣಿ ವ್ಯವಸ್ಥೆ ಹಾಗೂ ಆಯೋಗಕ್ಕೆ ನಿಗಧಿಪಡಿಸುವ ಗೌರವಧನ ಮತ್ತು ಭತ್ಯೆ ಇತರ ಆರ್ಥಿಕ ವೆಚ್ಚಗಳನ್ನು ಇತ್ಯಾದಿ ಸೌಲಭ್ಯಗಳನ್ನು ಒದಗಿಸಲು **ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ರವರು ಭರಿಸಲು** ಕ್ರಮವಹಿಸುವುದು.

ಮಾನ್ಯ ಆಯೋಗದ ಕಾರ್ಯವ್ಯಾಪ್ತಿ ಮತ್ತು ಷರತ್ತುಗಳನ್ನು **(Terms of Reference)** ಕಾಲಕಾಲಕ್ಕೆ ಸೇರ್ಪಡಿಸುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ನಾಗರಾಜು ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಡಾಳಿತ ಇಲಾಖೆ (ಕಾನೂನು ಮತ್ತು ಸುವ್ಯವಸ್ಥೆ)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು (ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಒದಗಿಸುವಂತೆ ಕೋರಿದೆ)

**ಪ್ರತಿ:**

1. ಗೌರವಾನ್ವಿತ ಶ್ರೀ ಪಿ.ಎನ್. ದೇಸಾಯಿ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರು, ಅಪರ್ಣ ಎಲಿನ ಅಪಾರ್ಟ್‌ಮೆಂಟ್, 1603, ವಿಂಗ್-ಎ, ಯಶವಂತಪುರ ರೈಲ್ವೆ ನಿಲ್ದಾಣದ ಹತ್ತಿರ, ತುಮಕೂರು ರಸ್ತೆ, ಯಶವಂತಪುರ, ಬೆಂಗಳೂರು-560022.
2. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ನಂ.5329, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.
4. ರಿಜಿಸ್ಟ್ರಾರ್ ಜನರಲ್, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಮತ್ತು ನಗರ ಮತ್ತು ಗ್ರಾಮಾಂತರ ಯೋಜನೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು.
10. ಮಾನ್ಯ ಮುಖ್ಯಮಂತ್ರಿ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11. ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿರವರು, ವಿಧಾನ ಸೌಧ, ಬೆಂಗಳೂರು.
12. ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿರವರು, ವಿಧಾನ ಸೌಧ, ಬೆಂಗಳೂರು.
13. ಶಾಖಾ ರಕ್ಷಾಕಡತ/ ಹೆಚ್ಚುವರಿ ಪ್ರತಿಗಳು

ಅನುಬಂಧ - 6

# ಕರ್ನಾಟಕಸರ್ಕಾರ

ಸಂಖ್ಯೆ: ಹೆಚ್‌ಡಿ 220 ಪಿಸಿಇ 2025

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:05.06.2025

## ಅಧಿಸೂಚನೆ

ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರು, ಬೆಂಗಳೂರು ಇವರ ಪತ್ರ ಸಂಖ್ಯೆ:ಎಲ್ & ಒ/6/84/ಬಿ ಸಿಟಿ/2025, ದಿನಾಂಕ: 04.06.2025 ರೊಂದಿಗಿರುವ ಪೊಲೀಸ್ ಆಯುಕ್ತರು, ಬೆಂಗಳೂರು ನಗರ, ಬೆಂಗಳೂರು ಇವರು, ಪತ್ರ ಸಂಖ್ಯೆ: ಡಿಸಿಪಿ ಗುಪ್ತವಾರ್ತೆ/2025, ದಿನಾಂಕ: 04.06.2025ರಲ್ಲಿ, ಆರ್.ಸಿ.ಬಿ. ತಂಡದ ವಿಜಯೋತ್ಸವ ಅಭಿನಂದನಾ ಸಮಾರಂಭ ನಡೆಯುವ ಸಂದರ್ಭದಲ್ಲಿ ಉಂಟಾದ ಕಾಲ್ತುಳಿತಕ್ಕೆ 11 ಜನರು ಮೃತಪಟ್ಟಿದ್ದು, 50 ಕ್ಕಿಂತ ಹೆಚ್ಚು ಜನರು ಗಾಯಗೊಂಡಿರುತ್ತಾರೆಂದು ವರದಿಯನ್ನು ಸಲ್ಲಿಸಿರುತ್ತಾರೆ.

ಸದರಿ ವರದಿಯ ಆಧಾರದ ಮೇಲೆ, ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 218 ಪಿಸಿಇ 2025, ಬೆಂಗಳೂರು ದಿನಾಂಕ: 04.06.2025ರಲ್ಲಿ, ಆರ್.ಸಿ.ಬಿ. ತಂಡದ ವಿಜಯೋತ್ಸವ ಅಭಿನಂದನಾ ಸಮಾರಂಭ ನಡೆಯುವ ಸಂದರ್ಭದಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಉಂಟಾದ ಕಾಲ್ತುಳಿತ ಹಾಗೂ ಮೃತಪಟ್ಟವರ ಸಾವಿಗೆ ಕಾರಣಗಳು, ಘಟನಾವಳಿಗಳ ಸರಣಿ ಹಾಗೂ ಸನ್ನಿವೇಶಗಳ ಬಗ್ಗೆ ಮತ್ತು ಈ ಪ್ರಕರಣದಲ್ಲಿ ಲೋಪ ಉಂಟಾಗಿದ್ದಲ್ಲಿ ಉಂಟಾಗಿರಬಹುದಾದ ಲೋಪಗಳ ಕುರಿತು, ಈ ಲೋಪಕ್ಕೆ ಕಾರಣರಾದವರ ಬಗ್ಗೆ ಹಾಗೂ ನಿರ್ಲಕ್ಷತೆಯಿಂದ ಉಂಟಾಗಿದೆಯೇ ಎಂಬ ಬಗ್ಗೆ ಮ್ಯಾಜಿಸ್ಟ್ರೀರಿಯಲ್ ವಿಚಾರಣೆ ನಡೆಸಲು ಶ್ರೀ ಜಗದೀಶ್. ಜಿ. ಐ.ಎ.ಎಸ್., ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಿ ಆದೇಶ ಹೊರಡಿಸಲಾಗಿತ್ತು.

ಮುಂದುವರೆದು, ಸದರಿ ಘಟನೆಯ ಬಗ್ಗೆ ಇನ್ನೂ ಹೆಚ್ಚಿನ ತನಿಖೆ ಅಗತ್ಯವಿದೆಯೆಂದು ಮನಗಂಡು, ಈ ಕುರಿತು ಸಮಗ್ರವಾದ ವಿಚಾರಣೆ ನಡೆಸುವ ಸಲುವಾಗಿ Commission of Inquiry Act, 1952ರ ನಿಯಮ 3 ರ ಉಪನಿಯಮ (1)ರನ್ವಯ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಿಂದ ವಿಚಾರಣೆ ನಡೆಸಲು ವಿಚಾರಣಾ ಆಯೋಗವನ್ನು ರಚಿಸಲು ಸರ್ಕಾರವು ತೀರ್ಮಾನಿಸಿದೆ.

ಈ ಹಿನ್ನೆಲೆಯಲ್ಲಿ, ದುರ್ಘಟನೆಯ ಬಗ್ಗೆ ವಿಚಾರಣೆಯನ್ನು ನಡೆಸಲು Commission of Inquiry Act, 1952ರ ನಿಯಮ 3ರ ಉಪನಿಯಮ (1)ರನ್ವಯ ಪ್ರದತ್ತವಾದ ಅಧಿಕಾರದನ್ವಯ ಸರ್ಕಾರವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ

ನ್ಯಾಯಾಧೀಶರಾದ ಶ್ರೀ ಜಾನ್ ಮೈಕಲ್ ಕುನ್ಹಾ ರವರ ನೇತೃತ್ವದಲ್ಲಿ ಏಕಸದಸ್ಯ ವಿಚಾರಣಾ ಆಯೋಗವನ್ನು ರಚಿಸಿದೆ.

ಸದರಿ ವಿಚಾರಣಾ ಆಯೋಗವು Commissions of Inquiry Act, 1952 ಹಾಗೂ Code of Civil Procedure ರಲ್ಲಿನ ಅವಕಾಶದಡಿ ವಿಚಾರಣೆ ನಡೆಸಲು ಎಲ್ಲಾ ಅಧಿಕಾರವನ್ನು ಹೊಂದಿರುತ್ತದೆ ಹಾಗೂ ತನಿಖೆಯನ್ನು ಒಂದು ತಿಂಗಳೊಳಗಾಗಿ ಪೂರ್ಣಗೊಳಿಸಿ ವರದಿಯನ್ನು ಸಲ್ಲಿಸತಕ್ಕದ್ದೆಂದು ಸರ್ಕಾರವು ಅಪೇಕ್ಷಿಸುತ್ತದೆ.

ಮಾನ್ಯ ಆಯೋಗದ ತನಿಖಾ ವ್ಯಾಪ್ತಿಗೆ ವಹಿಸಲಾಗಿರುವ ಅಂಶಗಳು (Terms of Reference) ಈ ಕೆಳಕಂಡಂತಿರುತ್ತದೆ:-

(1) ಬೆಂಗಳೂರು ನಗರದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್.ಸಿ.ಬಿ. ತಂಡದ ವಿಜಯೋತ್ಸವದ ಅಭಿನಂದನಾ ಸಮಾರಂಭದ ಕಾರ್ಯಕ್ರಮ ಆಯೋಜಿಸುವಾಗ ಅವಶ್ಯಕವಾದ ಅನುಮತಿಗಳು ಹಾಗೂ ನಿಯಮಗಳು, ಪ್ರಕ್ರಿಯೆಗಳನ್ನು ಪಾಲಿಸಲಾಗಿದೆಯೇ ಎಂಬ ಕುರಿತಂತೆ;

(2) ಬೆಂಗಳೂರು ನಗರದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್.ಸಿ.ಬಿ. ತಂಡದ ವಿಜಯೋತ್ಸವದ ಅಭಿನಂದನಾ ಸಮಾರಂಭದ ಘಟನೆಯಲ್ಲಿ ನಡೆದ ನೂಕುನುಗ್ಗಲು ಹಾಗೂ ಕಾಲ್ತುಳಿತಕ್ಕೆ ಕಾರಣಗಳು / ಕಾರಣಕರ್ತರು.

(3) 11 ಜನರ ಸಾವಿಗೆ ಹಾಗೂ 50 ಕ್ಕಿಂತ ಹೆಚ್ಚು ಜನರು ಗಾಯಾಳುಗಳಾದ ಸದರಿ ಘಟನಾವಳಿಗಳ ಸರಣಿ ಹಾಗೂ ಸನ್ನಿವೇಶಗಳ ಆಧಾರದಲ್ಲಿ, ಈ ದುರ್ಘಟನೆಗೆ ಕಾರಣಗಳು / ಕಾರಣಕರ್ತರು.

(4) ಬೆಂಗಳೂರು ನಗರದ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಘಟನೆಯ ಬಗ್ಗೆ ಮುಂಜಾಗ್ರತಾ ಹಾಗೂ ಮುನ್ನೆಚ್ಚರಿಕೆಯಾಗಿ ಕೈಗೊಂಡ ಕ್ರಮಗಳು ಹಾಗೂ ತತ್ಸಂಬಂಧ ಉಂಟಾಗಿರಬಹುದಾದ ಲೋಪ / ನ್ಯೂನತೆಗಳ ಬಗ್ಗೆ ಹಾಗೂ ಈ ಘಟನೆಗೆ ಕಾರಣರಾದವರನ್ನು ಗುರುತಿಸುವುದು.

(5) ಈ ದುರ್ಘಟನೆಗೆ ಕಾರಣವಾದ ಲೋಪ / ನ್ಯೂನತೆಗಳಿಗೆ ಕಾರಣಕರ್ತರನ್ನು ಗುರುತಿಸುವುದು.

(6) ಭವಿಷ್ಯತ್ತಿನಲ್ಲಿ ಸದರಿ ಘಟನೆಗಳಂತಹವು ಮರುಕಳಿಸದಂತೆ ವಹಿಸಬಹುದಾದ ಮುನ್ನೆಚ್ಚರಿಕಾ ಕ್ರಮಗಳ ಬಗ್ಗೆ.

(7) ಹಾಗೂ ಈ ದುರ್ಘಟನೆಗೆ ಸಂಬಂಧಿಸಿದ ಇನ್ನಿತರೆ ಅನ್ವಯಿಕ ಅಂಶಗಳ ಬಗ್ಗೆ.

ಸದರಿ ವಿಚಾರಣಾ ಆಯೋಗಕ್ಕೆ ಸಮಗ್ರ ಮಾಹಿತಿ/ ದಾಖಲೆಗಳನ್ನು ಒದಗಿಸಿ ಆಯೋಗವು ವಿಚಾರಣೆಯನ್ನು ಪೂರ್ಣಗೊಳಿಸಲು ಹಾಗೂ ಆಡಳಿತಾತ್ಮಕ ಹಾಗೂ ಇನ್ನಿತರೆ ಸಲಹೆಗಾರರನ್ನು ಒದಗಿಸಲು ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರು, ಬೆಂಗಳೂರು, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಜಿಲ್ಲೆ ಮತ್ತು ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ ಇವರುಗಳು ಆಯೋಗವು ಕಾಲಾನುಕಾಲಕ್ಕೆ ವಿಚಾರಣೆಗಾಗಿ ಅಪೇಕ್ಷಿಸುವ ಎಲ್ಲಾ ಕಡತಗಳು/ ದಾಖಲಾತಿಗಳು/ ಇತ್ಯಾದಿಗಳನ್ನು ಒದಗಿಸತಕ್ಕದ್ದು ಹಾಗೂ ವಿಚಾರಣೆ ಸಂದರ್ಭದಲ್ಲಿ ಹಾಜರಿದ್ದು, ವಿಚಾರಣಾ ಆಯೋಗದೊಂದಿಗೆ ಸಂಪೂರ್ಣವಾಗಿ ಸಹಕರಿಸತಕ್ಕದ್ದು.

ಈ ವಿಚಾರಣಾ ಆಯೋಗವು ಮ್ಯಾಜಿಸ್ಟೀರಿಯಲ್ ವಿಚಾರಣೆಗೆ ಹೊರತಾಗಿದ್ದು, ಸಮಾನಂತರವಾಗಿ, ಸಮಗ್ರವಾಗಿ ವಿಚಾರಣೆ ನಡೆಸತಕ್ಕದ್ದು.

ಮಾನ್ಯ ವಿಚಾರಣಾ ಆಯೋಗದ ಅಧ್ಯಕ್ಷರು, ಅಗತ್ಯವಿದ್ದಲ್ಲಿ ತಾಂತ್ರಿಕ ಹಾಗೂ ಕಾನೂನಾತ್ಮಕ ನೆರವಿಗಾಗಿ ಒಬ್ಬ ನಿವೃತ್ತ ಐ.ಪಿ.ಎಸ್. ಅಧಿಕಾರಿ ಹಾಗೂ ಒಬ್ಬ ನಿವೃತ್ತ ಐ.ಎ.ಎಸ್. ಅಧಿಕಾರಿಗಳ ಸೇವೆಯನ್ನು ಪಡೆಯಲು ಕ್ರಮವಹಿಸಬಹುದಾಗಿದೆ. ಸಂಬಂಧಿಸಿದ ಅಧಿಕಾರಿಗಳ ವೇತನ / ಭತ್ಯೆ ವೆಚ್ಚವನ್ನು ಸರ್ಕಾರವು ಭರಿಸತಕ್ಕದ್ದು.

ವಿಚಾರಣಾ ಆಯೋಗಕ್ಕೆ ಅಗತ್ಯವಿರುವ ಸಿಬ್ಬಂದಿ, ಸಾಮಗ್ರಿಗಳು, ವಾಹನಗಳ ವ್ಯವಸ್ಥೆ ಹಾಗೂ ಕಛೇರಿ ಮತ್ತು ಪೀಠೋಪಕರಣಗಳು / ದೂರವಾಣಿ ಇತ್ಯಾದಿ ಅಗತ್ಯ ಸಲಕರಣೆಗಳನ್ನು ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರು, ಬೆಂಗಳೂರು ಇವರು ಒದಗಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕುಮಟಾ ಪ್ರಕಾಶ್)**
ಸರ್ಕಾರದ ಉಪ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಕಾನೂನು & ಸುವ್ಯವಸ್ಥೆ)
☎080-2203 3707, **email**: aslo-home@karnataka.gov.in

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

**ಪ್ರತಿ:**

1. ಗೌರವಾನ್ವಿತ ಶ್ರೀ ಜಾನ್ ಮೈಕಲ್ ಕುನ್ಹಾ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರು, ನಂ. 80, 5ನೇ ಮುಖ್ಯರಸ್ತೆ, A.G's Colony, ಆನಂದನಗರ, ಬೆಂಗಳೂರು-560024.
2. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆಪೆಟ್ಟಿಗೆ ನಂ.5329, ಬೆಂಗಳೂರು.
3. ಅಡ್ವೊಕೇಟ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.
5. ರಿಜಿಸ್ಟ್ರಾರ್ ಜನರಲ್, ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಮಾನ್ಯ ಮುಖ್ಯಮಂತ್ರಿರವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
10. ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು, ಕಾನೂನು ಮತ್ತು ಸುವ್ಯವಸ್ಥೆ, ಬೆಂಗಳೂರು
11. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
12. ಪೊಲೀಸ್ ಆಯುಕ್ತರು, ಬೆಂಗಳೂರು ನಗರ, ಬೆಂಗಳೂರು.
13. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿಗಳು

ಅನುಬಂಧ - 7

ವಿಶೇಷ ತನಿಖಾ ತಂಡ ರಚಿಸಿದ ವಿವರಗಳು

ಅನುಬಂಧ

| ಕ್ರಮ ಸಂಖ್ಯೆ: | ಪ್ರಕರಣದ ಸಂಕ್ಷಿಪ್ತ ವಿವರ | ಸರ್ಕಾರದ ಆದೇಶ ಸಂಖ್ಯೆ | ವಿಶೇಷ ತನಿಖಾ ತಂಡದ ನೇತೃತ್ವ ವಹಿಸಿದವರು | ಅಪರಾಧ ಸಂಖ್ಯೆ | ತನಿಖಾ ಹಂತದ ಮಾಹಿತಿ |
|---|---|---|---|---|---|
| 1. | ಬಿಟ್ ಕಾಯಿನ್ ಮತ್ತು ಡಾರ್ಕ್‌ನೆಟ್‌ಗಳಲ್ಲಿ ಅವ್ಯವಹಾರದ ಪ್ರಕರಣ | 1. ಹೆಚ್‌ಡಿ 48 ಸಿಒಡಿ 2023(1), ದಿನಾಂಕ:30.06.2023.<br>2. ಹೆಚ್‌ಡಿ 48 ಸಿಒಡಿ 2023(2), ದಿನಾಂಕ:30.06.2023. | ಶ್ರೀ ಮನೀಶ್ ಖರ್ಬೀಕರ್, ಎಡಿಜಿಪಿ, ಆರ್ಥಿಕ ಅಪರಾಧಗಳು, ಕಾರ್ಲಟನ್ ಭವನ, ಬೆಂಗಳೂರು | 1) ಬೆಂಗಳೂರು ನಗರ, ಕಾಟನ್ ಪೇಟೆ ಅಪರಾಧ ಸಂಖ್ಯೆ:153/2020 ಕಲಂ 120(ಬಿ)379, 384, 420, 465, 468, 471 ರೆ/ವಿ 34 ಐಪಿಸಿ ಹಾಗೂ 66, 66(ಸಿ) ಇನ್‌ಫಾರ್ಮೇಷನ್ ಟೆಕ್ನಾಲಜಿ ಆಕ್ಟ್-200 | ತನಿಖೆ ಪೂರ್ಣಗೊಳಿಸಿ ಸಕ್ಷಮ ನ್ಯಾಯಾಲಯದಲ್ಲಿ ದೋಷಾರೋಪಣೆ ಪಟ್ಟಿ ಸಲ್ಲಿಸಿದೆ. |
| | | ಹೆಚ್‌ಡಿ 48 ಸಿಒಡಿ 2023, ದಿನಾಂಕ:14.07.2023 | | 2) ಬೆಂಗಳೂರು ನಗರ ಸೈಬರ್ ಕ್ರೈಂ ಪೊಲೀಸ್ ಠಾಣೆ ಅಪರಾಧ ಸಂಖ್ಯೆ:45/2020 ಕಲಂ 66(ಸಿ), 66(ಡಿ) ಐಟಿ ಆಕ್ಟ್ ಮತ್ತು ಕಲಂ 420 ಐಪಿಸಿ | ತನಿಖೆ ಪೂರ್ಣಗೊಳಿಸಿ ಸಕ್ಷಮ ನ್ಯಾಯಾಲಯದಲ್ಲಿ ದೋಷಾರೋಪಣೆ ಪಟ್ಟಿ ಸಲ್ಲಿಸಿದೆ |
| | | | | 3) ತುಮಕೂರು ಜಿಲ್ಲೆ, ತುಮಕೂರು ನ್ಯೂ ಎಕ್ಸ್‌ಟೆನ್ಷನ್ ಪೊ.ಠಾ. ಅಪರಾಧ ಸಂಖ್ಯೆ:85/2017 ಕಲಂ 66, 67, 68 ಐ.ಟಿ ಆಕ್ಟ್-2000 ಮತ್ತು ಕಲಂ 420 ಐಪಿಸಿ | ದೋಷಾರೋಪಣೆ ಪಟ್ಟಿ ಪರಿಶೀಲನೆಯಲ್ಲಿದ್ದು, ನಂತರ ಸಕ್ಷಮ ನ್ಯಾಯಾಲಯಕ್ಕೆ ದೋಷಾರಪಣೆ ಪಟ್ಟಿ ಸಲ್ಲಿಸಲಾಗುವುದು. |
| | | | | 4) ಬೆಂಗಳೂರು ನಗರ ಕೆ.ಜಿ ನಗರ ಪೊ.ಠಾ ಅಪರಾಧ ಸಂಖ್ಯೆ:91/2020 ಕಲಂ 20(ಬಿ), 23(ಬಿ), 27(ಎ) ಎನ್.ಡಿ.ಪಿ.ಎಸ್ ಆಕ್ಟ್-1985 | ತನಿಖೆ ಪೂರ್ಣಗೊಳಿಸಿ ಸಕ್ಷಮ ನ್ಯಾಯಾಲಯದಲ್ಲಿ ದೋಷಾರೋಪಣೆ ಪಟ್ಟಿ ಸಲ್ಲಿಸಿದೆ |
| | | | | 5) ಸಿಐಡಿ ಸಿಸಿಪಿಎಸ್ ಪೊ.ಠಾ. ಅಪರಾಧ ಸಂಖ್ಯೆ:09/2019 ಕಲಂ | ತನಿಖೆ ಪೂರ್ಣಗೊಳಿಸಿ ಸಕ್ಷಮ ನ್ಯಾಯಾಲಯದಲ್ಲಿ |

| | | | | | |
|---|---|---|---|---|---|
| | | | | 43 ರೆ/ವಿ 66, 66(ಸಿ), 66(ಡಿ) ಐಟಿ ಆಕ್ಟ್ ಮತ್ತು 419, 420 ಐಪಿಸಿ | ದೋಷಾರೋಪಣೆ ಪಟ್ಟಿ ಸಲ್ಲಿಸಿದೆ |
| | | | | 6) ಬೆಂಗಳೂರು ನಗರ, ಅಶೋಕ ನಗರ ಪೊ.ಠಾ .ಅಪರಾಧ ಸಂಖ್ಯೆ:287/ 2020 ಕಲಂ 406, 420 ಐಪಿಸಿ | ತನಿಖೆ ಪೂರ್ಣಗೊಳಿಸಿ ಸಕ್ಷಮ ನ್ಯಾಯಾಲಯದಲ್ಲಿ ದೋಷಾರೋಪಣೆ ಪಟ್ಟಿ ಸಲ್ಲಿಸಿದೆ |
| | | ಹೆಚ್‌ಡಿ 48 ಸಿಒಡಿ 2023, ದಿನಾಂಕ:11.08.2023 | | 7) ಬೆಂಗಳೂರು ನಗರ ಸೈಬರ್ ಕ್ರೈಂ ಪೊ.ಠಾ.ಅಪರಾಧ ಸಂಖ್ಯೆ: 4801/2018 ಕಲಂ 65, 66, 66(ಸಿ), 66(ಡಿ) ಐಟಿ ಆಕ್ಟ್-2000 ಕಲಂ 419, 420, 471, 468, 474, 465 ಐಪಿಸಿ | ತನಿಖೆ ಪೂರ್ಣಗೊಳಿಸಿ ಸಕ್ಷಮ ನ್ಯಾಯಾಲಯದಲ್ಲಿ ದೋಷಾರೋಪಣೆ ಪಟ್ಟಿ ಸಲ್ಲಿಸಿದೆ |
| | | | | 8) ಬೆಂಗಳೂರು ನಗರ ಕಾಟನ್ ಪೇಟೆ ಪೊ.ಠಾ ಅಪರಾಧ ಸಂಖ್ಯೆ: 302/2023 ಕಲಂ 120(ಬಿ), 409, 204, 426 ಐಪಿಸಿ | ಅಭಿಯೋಜನಾ ಮಂಜರೂರು ಮಂಜೂರಾತಿ ಪ್ರಸ್ತಾವನೆಯು ಪರಿಶೀಲನಾಹಂತದಲ್ಲಿದೆ. |
| | | ಹೆಚ್‌ಡಿ 48 ಸಿಒಡಿ 2023, ದಿನಾಂಕ:29.07.2024 | | 9) ಬೆಂಗಳೂರು ನಗರ ಸೈಬರ್ ಕ್ರೈಂ ಪೊ.ಠಾ.ಅಪರಾಧ ಸಂಖ್ಯೆ: 01/2024 ಕಲಂ 343, 344, 409, 426, 34, 36, 37, 201, 204 ಐಪಿಸಿ ಹಾಗೂ ಕಲಂ 66, 84(ಸಿ) | |
| 2. | ಹಾಸನ ಜಿಲ್ಲೆಯಲ್ಲಿ ಮಹಿಳೆಯ ಮೇಲೆ ನಡೆಸಲಾಗುತ್ತಿರುವ ಲೈಂಗಿಕ ಚಿತ್ರೀಕರಣದ ಪ್ರಕರಣ | ಹೆಚ್‌ಡಿ 51 ಸಿಒಡಿ 2024, ದಿನಾಂಕ:28.04.2024 | ಶ್ರೀ ಬಿಜಯ ಕುಮಾರ್ ಸಿಂಗ್, ಐಪಿಎಸ್, ಅಪರ ಪೊಲೀಸ್ ಮಹಾ ನಿರ್ದೇಶಕರು, ಸಿಐಡಿ, ಬೆಂಗಳೂರು. | 1) ಹಾಸನ ಜಿಲ್ಲೆ ಹೊಳೆನರಸೀಪುರ ಟೌನ್ ಪೊ.ಠಾ. ಅಪರಾಧ ಸಂಖ್ಯೆ: 107/2024 ಕಲಂ 354ಎ, 354ಡಿ, 506, 509 ಐಪಿಸಿ | ತನಿಖೆ ಪೂರ್ಣಗೊಳಿಸಿ ದೋಷಾರಪಣೆ ಪಟ್ಟಿಯನ್ನು ಸಕ್ಷಮ ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ. |
| | | | | 2) ಕೆ.ಆರ್. ನಗರ ಪೊಲೀಸ್ ಠಾಣೆ ಮೊ.ಸಂ. ಸಂಖ್ಯೆ :149/2024 ಕಲಂ 364(ಎ), 365, 109, 120(ಬಿ) ರೆ/ವಿ 34 ಐಪಿಸಿ | |
| | | | | 3) ಸಿ.ಐ.ಡಿ ಪೊಲೀಸ್ ಠಾಣೆ ಮೊ.ಸಂ.20/2024 ಕಲಂ 376(2)(ಎನ್), 506, 354(ಎ) (1)(2), | |

| | | | | | |
|---|---|---|---|---|---|
| | | | | 354(ಬಿ), 354(ಸಿ) ಐಪಿಸಿ ಮತ್ತು ಕಲಂ 66(ಇ) ಐ.ಟಿ. ಆಕ್ಟ್-2008 | |
| | | | | 4) ಸಿ.ಐ.ಡಿ ಸೈಬರ್ ಕ್ರೈಂ ಪೊಲೀಸ್ ಠಾಣೆ ಮೊ.ಸಂ.02/2024 ಕಲಂ 376(2)(ಕೆ), 376(2)(ಎನ್), 354(ಎ), 354(ಬಿ), 354(ಸಿ), 506 ಐಪಿಸಿ ಮತ್ತು ಕಲಂ 66(ಇ) ಐ.ಟಿ. ಆಕ್ಟ್-2008 | |
| | | | | 5) ಸಿ.ಐ.ಡಿ ಸೈಬರ್ ಕ್ರೈಂ ಪೊಲೀಸ್ ಠಾಣೆ ಮೊ.ಸಂ.03/2024 ಕಲಂ 354(ಎ), 354(ಬಿ), 354(ಡಿ), 506 ಐಪಿಸಿ ಮತ್ತು ಕಲಂ 66(ಇ) , 67 ಐ.ಟಿ. ಆಕ್ಟ್-2000 | |
| | | | | 6) ಹಾಸನ ಸೆನ್ ಪೊಲೀಸ್ ಠಾಣೆ ಮೊ.ಸಂ.33/2024 ಕಲಂ 67(ಎ) ಐ.ಟಿ ಆಕ್ಟ್ 2008 ಮತ್ತು 171(ಜಿ) ಐಪಿಸಿ. | ತನಿಖಾ ಹಂತದಲ್ಲಿದೆ |
| 3. | ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಣ ದುರುಪಯೋಗದ ಕುರಿತು. | ಹೆಚ್‌ಡಿ 64 ಸಿಒಡಿ 2024, ದಿನಾಂಕ:31.05.2024 | ಶ್ರೀ ಮನೀಶ್ ಖರ್ಬೀಕರ್, ಐಪಿಎಸ್, ಅಪರ ಪೊಲೀಸ್ ಮಹಾನಿರ್ದೇಶಕರು, ಆರ್ಥಿಕ ಅಪರಾಧಗಳು, ಸಿಐಡಿ, ಬೆಂಗಳೂರು | 1) ಶಿವಮೊಗ್ಗ ಜಿಲ್ಲೆ ವಿನೋಬ ನಗರ ಪೊ.ಠಾ ಅಪರಾಧ ಸಂಖ್ಯೆ:83/2024 ಕಲಂ 360 ರೆ/ವಿ 34 ಐಪಿಸಿ | ತನಿಖಾ ಹಂತದಲ್ಲಿದೆ. |
| | | | | 2) ಬೆಂಗಳೂರು ನಗರ ಹೈಗ್ರೌಂಡ್ಸ್ ಪೊ.ಠಾ ಅಪರಾಧ ಸಂಖ್ಯೆ:118/2024 ಕಲಂ 149, 409, 420, 467, 471 ಐಪಿಸಿ | |
| | | | | 3) ಬೆಂಗಳೂರು ನಗರ ವಿಜಯನಗರ ಪೊ.ಠಾ ಅಪರಾಧ ಸಂಖ್ಯೆ:109/2024 ಕಲಂ 149, 409, 420, 467, 468, 471 ಐಪಿಸಿ. | |
| | | | | 4) ಬೆಂಗಳೂರು ನಗರ ವಿಜಯನಗರ ಪೊ.ಠಾ ಅಪರಾಧ ಸಂಖ್ಯೆ:110/2024 ಕಲಂ 149, 409, 420, 467, 468, 471 ಐಪಿಸಿ. | |

| | | | | | |
|---|---|---|---|---|---|
| | | | | 5) ಬೆಂಗಳೂರು ನಗರ ಕೆಂಪಾಪುರ ಪೊ.ಠಾ ಅಪರಾಧ ಸಂಖ್ಯೆ:93/2024 ಕಲಂ 409, 420, 465, 468, 471 ಐಪಿಸಿ. | |
| | | | | 6) ಬೆಂಗಳೂರು ನಗರ ಕೆಂಪಾಪುರ ಪೊ.ಠಾ ಅಪರಾಧ ಸಂಖ್ಯೆ:94/2024 ಕಲಂ 409, 420, 465, 468, 471 ಐಪಿಸಿ. | |
| | | | | 7) ಬೆಂಗಳೂರು ನಗರ ಸಿದ್ದಾಪುರ ಪೊ.ಠಾ ಅಪರಾಧ ಸಂಖ್ಯೆ:201/2024 ಕಲಂ 465 ಐಪಿಸಿ. | |
| | | | | 8) ಬೆಂಗಳೂರು ನಗರ ಸಿದ್ದಾಪುರ ಪೊ.ಠಾ ಅಪರಾಧ ಸಂಖ್ಯೆ:202/2024 ಕಲಂ 465 ಐಪಿಸಿ. | |
| 4. | ಪೊಲೀಸ್ ಇಲಾಖೆಯ 545 ಪಿಎಸ್ಐ ಹುದ್ದೆಗಳ ನೇರ ನೇಮಕಾತಿ ಅವ್ಯಹಾರದ ಕುರಿತು | ಒಇ 53 ಪೊಸಇ 2023, ದಿನಾಂಕ:12.06.2024 ಒಇ 53 ಪೊಸಇ 2023, ದಿನಾಂಕ:26.08.2024 | ಶ್ರೀ ಮನೀಶ್ ಖರ್ಬೀಕರ್, ಐಪಿಎಸ್, ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಆರ್ಥಿಕ ಅಪರಾಧ ಗಳು, ಸಿಐಡಿ, ಬೆಂಗಳೂರು | ಕಲಬುರಗಿ ವಿಶ್ವವಿದ್ಯಾಲಯ ಪೊ.ಠಾ ಅಪರಾಧ ಸಂಖ್ಯೆ:30/2023 ಕಲಂ 109, 114, 120ಬಿ, 409, 420, 34, 36, 37 ಸಹ ಕಲಂ 149 ಐಪಿಸಿ | ದೋಷಾರೋಪಣೆ ಪಟ್ಟಿಯನ್ನು ಸಕ್ಷಮ ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ. |
| 5. | ಮಾಜಿ ಸಚಿವರು ಹಾಗೂ ಹಾಲಿ ಶಾಸಕರೋರ್ವರ ವಿರುದ್ಧ ಜಾತಿ ನಿಂದನೆ, ಲಂಚದ ಬೇಡಿಕೆ ಮತ್ತು ಲೈಂಗಿಕ ದೌರ್ಜನ್ಯ ಪ್ರಕರಣಗಳ ಕುರಿತು. | ಹೆಚ್‌ಡಿ 142 ಸಿಒಡಿ 2024, ದಿನಾಂಕ:21.09.2024 | ಶ್ರೀ ಬಿ.ಕೆ. ಸಿಂಗ್, ಐಪಿಎಸ್, ಅಪರ ಪೊಲೀಸ್ ಮಹಾ ನಿರ್ದೇಶಕರು, ಆರ್ಥಿಕ ಅಪರಾಧಗಳು, ಸಿಐಡಿ, ಬೆಂಗಳೂರು | 1) ಬೆಂಗಳೂರು ನಗರ, ವೈಯಾಲಿಕಾವಲ್ ಪೊ.ಠಾ ಅಪರಾಧ ಸಂಖ್ಯೆ:121/2024, ಕಲಂ 506, 504, 385, 420, 323 ರೆ/ವಿ 34 ಐಪಿಸಿ. | 06 ಪ್ರಕರಣಗಳಲ್ಲಿ 02 ಪ್ರಕರಣಗಳ ತನಿಖೆ ಪೂರ್ಣಗೊಳಿಸಿ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ, 03 ಪ್ರಕರಣಗಳಲ್ಲಿ 'ಬಿ' ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ, ಉಳಿದ 01 |
| | | | | 2) ವೈಯಾಲಿಕಾವಲ್ ಪೊ.ಠಾ ಮೊ.ಸಂ.122/2024, ಕಲಂ 153(ಎ)(1)(ಎ)(ಬಿ), 509, 504, 153 ಐಪಿಸಿ. | |
| | | | | 3) ರಾಮನಗರ ಜಿಲ್ಲೆ, ಕಗ್ಗಲೀಪುರ ಪೊ.ಠಾ ಮೊ.ಸಂ.312/2024, ಕಲಂ | |

| | | | | | |
|---|---|---|---|---|---|
| | | | | 354(ಎ), 354(ಸಿ), 376(2)(ಎನ್), 506, 504, 120(ಬಿ), 149, 384, 406, 308 ಐಪಿಸಿ ಮತ್ತು ಕಲಂ 66, 66(ಇ) ಐಟಿ ಕಾಯ್ದೆ-2000.<br>4) ಯಶವಂತಪುರ ಪೊ.ಠಾ ಮೊ.ಸಂ.336/2024 ಕಲಂ 232(1), 351(2) ಬಿಎನ್ಎಸ್<br>5) ನಂದಿನಿಲೇಔಟ್ ಪೊ.ಠಾ ಮೊ.ಸಂ.376/2024, ಕಲಂ 354(ಸಿ), 109, 110, 354, 115, 116, 118 ಐಪಿಸಿ<br>6) ಯಶವಂತಪುರ ಆರ್ ಎಂಸಿ ಯಾರ್ಡ್ ಪೊ.ಠಾ.ಮೊ.ಸಂ.86/2025 ಕಲಂ 376(ಡಿ), 270, 323, 354, 504, 506, 509 ಜೊತೆಗೆ 34 ಐಪಿಸಿ. | ಪ್ರಕರಣವು ಎಸ್ಐಟಿ ತನಿಖೆಯಲ್ಲಿರುತ್ತದೆ. |
| 6. | ಧರ್ಮಸ್ಥಳ ವ್ಯಾಪ್ತಿಯಲ್ಲಿ ಅಸ್ವಾಭಾವಿಕ ಸಾವು, ಕೊಲೆ ಮತ್ತು ಅತ್ಯಾಚಾರದ ಸಂಬಂಧ ಪ್ರಕರಣಗಳ ಕುರಿತು. | ಹೆಚ್‌ಡಿ 142 ಸಿಒಡಿ 2025, ದಿನಾಂಕ:19.07.2025 | ಡಾ: ಪ್ರಣವ ಮೊಹಾಂತಿ, ಐಪಿಎಸ್, ಪೊಲೀಸ್ ಮಹಾನಿರ್ದೇಶಕರು, ಆಂತರಿಕ ಭದ್ರತಾ ವಿಭಾಗ, ಬೆಂಗಳೂರು. | ಧರ್ಮಸ್ಥಳ ಪೊ.ಠಾ ಮೊ.ಸಂ:39/2025 ಕಲಂ 211)ಎ) ಬಿ.ಎನ್.ಎಸ್. | ತನಿಖಾ ಹಂತದಲ್ಲಿದೆ. |
| 7. | ಕಲ್ಬುರ್ಗಿ ಜಿಲ್ಲೆ ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿಯಲ್ಲಿ ಮತದಾರರನ್ನು ಅನಧಿಕೃತವಾಗಿ ಕೈಬಿಟ್ಟಿರುವ ಕುರಿತು ಚುನಾವಣಾ ಆಯೋಗಕ್ಕೆ ನೀಡಿದ ದೂರು. | ಹೆಚ್‌ಡಿ 194 ಸಿಒಡಿ 2025, ದಿನಾಂಕ:20.09.2025 | ಶ್ರೀ ಬಿ.ಕೆ. ಸಿಂಗ್, ಐಪಿಎಸ್, ಅಪರ ಪೊಲೀಸ್ ಮಹಾ ನಿರ್ದೇಶಕರು, ಆರ್ಥಿಕ ಅಪರಾಧಗಳು, ಸಿಐಡಿ, ಬೆಂಗಳೂರು | ಆಳಂದ ಪೊ.ಠಾ ಮೊ.ಸಂ:26/2023, ಕಲಂ 182, 419, 464, 465 ಐಪಿಸಿ. | ತನಿಖಾ ಹಂತದಲ್ಲಿದೆ. |